ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೪೯

# ಪಟ್ಟಿ – ೨೨

# ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತಮೂರನೆಯ ಅಧಿವೇಶನ
(ಮುಂದುವರೆದ ಉಪವೇಶನ)

ಸೋಮವಾರ, ದಿನಾಂಕ : ೨೯ನೇ ಮಾರ್ಚ್, ೨೦೨೧

---

## ಸಮೂಹ – I

೧. ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು.

೨. ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು.

೩. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು.

೪. ಅರಣ್ಯ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು.

೫. ಪ್ರವಾಸೋದ್ಯಮ ಮತ್ತು ಪರಿಸರ ಮತ್ತು ಜೀವಿಪರಿಸ್ಥಿತಿ ಸಚಿವರು.

೬. ಕಾರ್ಮಿಕ ಸಚಿವರು.

---

## ಬೀದರ್ ಜಿಲ್ಲೆಯಲ್ಲಿ ಗಿರಿಜನ ಉಪಯೋಜನೆಗಳ ಕುರಿತು

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೯೭೪ (೨೩೭೭) ಮಾನ್ಯ ಅರಣ್ಯ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಾಡಿನ ವಿವಿಧ ಭಾಗಗಳಲ್ಲಿ ವಾಸಿಸುತ್ತಿರುವ ಗಿರಿಜನ ಸಮುದಾಯವನ್ನು ವಿಶೇಷವಾಗಿ ಸಮಾಜದ ಮುಖ್ಯವಾಹಿನಿಗೆ ಕರೆತರುವ ಸದುದ್ದೇಶದಿಂದ ಸರ್ಕಾರವು ಗಿರಿಜನ ಉಪಯೋಜನೆಯಡಿಯಲ್ಲಿ ವಿಶೇಷ ನಿಧಿಯನ್ನು ಸ್ಥಾಪಿಸಿ, ಪ್ರತ್ಯೇಕವಾಗಿ ಬಿಡುಗಡೆ ಮಾಡಲಾದ ಅನುದಾನ ಎಷ್ಟು ; (ವಿವರ ನೀಡುವುದು)

(ಆ) ಹಾಗಿದ್ದಲ್ಲಿ, ಪರಿಶಿಷ್ಟ ಪಂಗಡದ (ಎಸ್.ಟಿ) ಕಲಾವಿದರು ಮತ್ತು ಸಂಸ್ಥೆಗಳು ಪ್ರತಿಭಾ ಪ್ರದರ್ಶನಕ್ಕೆ ಅವಕಾಶಗಳನ್ನು ಮತ್ತು ಆರ್ಥಿಕ ನೆರವನ್ನು ಒದಗಿಸಲಾಗುತ್ತಿದೆಯೇ ; (ವಿವರ ನೀಡುವುದು)

(ಇ) ಜನಪದ ತರಬೇತಿ ಕಾರ್ಯಕ್ರಮಗಳಿಗೆ ಗುರು–ಶಿಷ್ಯ ಪರಂಪರೆಯ ಅಡಿಯಲ್ಲಿ ಗುರುಕುಲ ಮಾದರಿಯ ಶಿಕ್ಷಣಕ್ಕೆ ಎಷ್ಟು ಅನುದಾನ ಮೀಸಲಿಡಲಾಗಿದೆ ; ಇದ್ದಲ್ಲಿ, ವಿವರ ನೀಡುವುದು ;

(ಈ) ಕಳೆದ ೫ ವರ್ಷಗಳಿಂದ ಕಲಾವಿದರಿಗೆ ವಾರ್ಷಿಕ ವೇತನ ನೀಡಲಾಗುತ್ತಿದೆಯೇ ? (ತಾಲ್ಲೂಕುವಾರು ವಿವರವಾದ ಮಾಹಿತಿ ನೀಡುವುದು)

## ಉಪ ಆರೋಗ್ಯ ಕೇಂದ್ರ್ರಗಳನ್ನು ಮೇಲ್ದರ್ಜೆಗೇರಿಸುವ ಕುರಿತು

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೯೭೫ (೨೩೭೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿನ ಪ್ರಾಥಮಿಕ ಉಪ ಆರೋಗ್ಯ ಕೇಂದ್ರಗಳನ್ನು ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಹಾಗಿದ್ದಲ್ಲಿ, ಯಾವಾಗ ಕ್ರಮ ಕೈಗೊಳ್ಳಲಾಗುವುದು ಮತ್ತು ಯಾವ ಯಾವ ಉಪ ಆರೋಗ್ಯ ಕೇಂದ್ರಗಳನ್ನು ಮೇಲ್ದರ್ಜೆಗೇರಿಸಲಾಗುವುದು ; (ವಿವರ ನೀಡುವುದು)

(ಆ) ಈವರೆಗೆ ಯಾವ ಯಾವ ಉಪ ಆರೋಗ್ಯ ಕೇಂದ್ರಗಳನ್ನು ಮೇಲ್ದರ್ಜೆಗೇರಿಸಲಾಗಿದೆ ಹಾಗೂ ಎಷ್ಟು ಬಾಕಿ ಉಳಿದಿವೆ ? (ವಿವರ ನೀಡುವುದು)

## ಬೀದರ್ ಜಿಲ್ಲೆಯಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣದ ಅನುದಾನದ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೯೭೬ (೨೩೭೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೮–೧೯ ರಿಂದ ೨೦೨೦–೨೧ ರವರೆಗೆ ಬೀದರ್ ಜಿಲ್ಲೆಯಲ್ಲಿ ಆರ್.ಎಂ.ಎಸ್.ಎ ಯೋಜನೆಯಡಿಯಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಗೆ ಎಷ್ಟು ಅನುದಾನ ಬಿಡುಗಡೆಯಾಗಿದೆ ;

(ಆ) ಕೋವಿಡ್–೧೯ರ ಅವಧಿಯಲ್ಲಿ ಶಿಕ್ಷಣ ಇಲಾಖೆಯು ಯಾವ ಯಾವ ಯೋಜನೆಗೆ ಅನುದಾನ ಖರ್ಚು ಮಾಡಲಾಗಿದೆ ಹಾಗೂ ಉಳಿದ ಅನುದಾನವೆಷ್ಟು ?

## ಬೀದರ್ ಜಿಲ್ಲೆಯಲ್ಲಿ ಕಾರ್ಮಿಕರುಗಳಿಗೆ ರಾಷ್ಟ್ರೀಯ ಸ್ವಾಸ್ಥ್ಯ ಭೀಮಾ ಯೋಜನೆ ಕುರಿತು

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೯೭೭ (೨೩೭೬) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯ ವ್ಯಾಪ್ತಿಯಲ್ಲಿ ಕಳೆದ ೩ ವರ್ಷಗಳಲ್ಲಿ ರಾಷ್ಟ್ರೀಯ ಸ್ವಾಸ್ಥ್ಯ ಭೀಮಾ ಯೋಜನೆಯಡಿಯಲ್ಲಿ ಭೀಮಾ ಸೌಲಭ್ಯಕ್ಕಾಗಿ ಎಷ್ಟು ಕಾರ್ಮಿಕರು ನೋಂದಣಿ ಮಾಡಲಾಗಿದೆ ; ಅವರುಗಳಿಗೆ ಸ್ಮಾರ್ಟ್ ಕಾರ್ಡ್ ಮಾಡಿಸಲಾಗಿದೆಯೇ ; ಹಾಗಿದ್ದಲ್ಲಿ, ಸ್ಮಾರ್ಟ್ ಕಾರ್ಡ್ ವಿತರಣೆ ಮಾಡಲು ಬಾಕಿ ಇರುವ ಕಾರ್ಮಿಕರ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಈ ಯೋಜನೆಯಡಿಯಲ್ಲಿ ಯಾವ ಯಾವ ಕಾರ್ಮಿಕರು ಒಳಪಡುತ್ತಾರೆ ; ಈ ಯೋಜನೆಗೆ ಒಳಪಟ್ಟ ಕಾರ್ಮಿಕರ ಸಂಖ್ಯೆ ಎಷ್ಟು ? (ವಿವರ ನೀಡುವುದು)

## ಪದವಿ ಕಾಲೇಜುಗಳಿಂದ ಬೇರ್ಪಟ್ಟ ಪದವಿ ಪೂರ್ವ ಕಾಲೇಜುಗಳ ಬಗ್ಗೆ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೧೯೭೮ (೨೪೦೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪದವಿ ಕಾಲೇಜುಗಳಿಂದ ಬೇರ್ಪಟ್ಟ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು ; ಮತ್ತು ಅವು ಯಾವುವು ; (ವಿವರ ನೀಡುವುದು) ಪ್ರತಿಯೊಂದರ ಕಾಲೇಜಿನ ಹೆಸರು, ಖಾಲಿಯಿರುವ ಹುದ್ದೆಗಳ ಸಂಖ್ಯೆಯ ಹಾಗೂ ಮಂಜೂರಾದ ಹುದ್ದೆಗಳ ಸಂಖ್ಯೆ ವಿವರ ನೀಡುವುದು ;

(ಆ) ಪದವಿ ಕಾಲೇಜಿಗೆ ಹಂಚಿಕೆಯಾದ ಹುದ್ದೆಗಳು ಯಾವುವು ; ಪದವಿ ಪೂರ್ವ ಕಾಲೇಜಿಗೆ ಹಂಚಿಕೆಯಾದ ಹುದ್ದೆಗಳು ಯಾವುವು ; (ವಿವರ ನೀಡುವುದು)

(ಇ) ಈ ರೀತಿ ಪದವಿ ಕಾಲೇಜುಗಳಿಂದ ಬೇರ್ಪಟ್ಟ ಪದವಿ ಪೂರ್ವ ಕಾಲೇಜುಗಳಲ್ಲಿ ಪ್ರಾಚಾರ್ಯರ ಹುದ್ದೆ ಸೃಷ್ಟಿಗೆ ಸರ್ಕಾರದ ನಿಲುವೇನು ; ಈ ಹುದ್ದೆ ಭರ್ತಿಗೆ ಸರ್ಕಾರ ತೆಗೆದುಕೊಂಡ ಕ್ರಮವೇನು ; ಹಾಗೂ ಖಾಲಿ ಇರುವ ಇತರೆ ಹುದ್ದೆಗಳ ಭರ್ತಿಗೆ ಸರ್ಕಾರ ಕ್ರಮ ಕೈಗೊಂಡಿದೆಯೇ ? (ಸಂಪೂರ್ಣ ವಿವರವನ್ನು ನೀಡುವುದು)

## ಅಕ್ಷರ ದಾಸೋಹ ಕಛೇರಿಗಳಲ್ಲಿ ಹೊರ ಗುತ್ತಿಗೆ ಆಧಾರದ ಸಿಬ್ಬಂದಿಗಳ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೧೯೭೯ (೨೪೦೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಕ್ಷರ ದಾಸೋಹ ಕಛೇರಿಗಳಲ್ಲಿ ಹೊರ ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳನ್ನು ಸೇವೆಯಿಂದ ಕೈಬಿಟ್ಟಿರುವುದಕ್ಕೆ ಕಾರಣವೇನು ;

(ಆ) ಒಟ್ಟು ಎಷ್ಟು ಸಿಬ್ಬಂದಿಗಳು ಕಾರ್ಯ ನಿರ್ವಹಿಸುತ್ತಿದ್ದಾರೆ ; ಅಕ್ಷರ ದಾಸೋಹ ಯೋಜನೆಯ ಯಾವ ಯಾವ ಹಂತಗಳಲ್ಲಿ ಗಣಕ ಯಂತ್ರ ನಿರ್ವಾಹಕರು ಹಾಗೂ ಗ್ರೂಪ್ 'ಡಿ' ಸಿಬ್ಬಂದಿ ಸೇವೆ ಸಲ್ಲಿಸುತ್ತಿದ್ದಾರೆ ;

(ಇ) ಈ ರೀತಿ ಏಕಾಏಕಿ ಕೆಲಸದಿಂದ ಬಿಡುಗಡೆಗೊಳಿಸಿರುವುದರಿಂದ ಇವರ ಜೀವನ ನಿರ್ವಹಣೆಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಸಿಬ್ಬಂದಿಗಳನ್ನು ಪುನ: ಕರ್ತವ್ಯಕ್ಕೆ ಸೇರಿಸಿಕೊಳ್ಳಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ? (ಸಂಪೂರ್ಣ ವಿವರ ನೀಡುವುದು)

## ಜೆ.ಓ.ಸಿ ಯಿಂದ ವಿಲೀನಗೊಳ್ಳದೇ ಬಾಕಿ ಉಳಿದಿರುವ ಸಿಬ್ಬಂದಿಗಳ ಬಗ್ಗೆ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೧೯೮೦ (೨೪೦೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವೃತ್ತಿ ಶಿಕ್ಷಣ ಇಲಾಖೆ (ಜೆ.ಓ.ಸಿ)ಯಿಂದ ಇತರೆ ಇಲಾಖೆಗಳಿಗೆ ೨೦೧೧ರಲ್ಲಿ ವಿಲೀನಗೊಂಡ ಸಿಬ್ಬಂದಿಗಳ ಸಂಖ್ಯೆ ಎಷ್ಟು ; ಒಟ್ಟು ಎಷ್ಟು ಜನ ಸಿಬ್ಬಂದಿಗಳನ್ನು ವಿಲೀನಗೊಳಿಸಲಾಗಿದೆ ; ಯಾವ ಯಾವ ಇಲಾಖೆಗಳಿಗೆ ವಿಲೀನಗೊಳಿಸಲಾಗಿದೆ ; (ಪ್ರತಿಯೊಬ್ಬರ ವಿವರವನ್ನು ಒದಗಿಸುವುದು)

(ಆ) ವಿಲೀನಗೊಳಿಸದೆ ಬಾಕಿ ಉಳಿದುಕೊಂಡಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ಮತ್ತು ಅವರು ಯಾರು ಯಾರು ; ಈ ಸಿಬ್ಬಂದಿಗಳನ್ನು ವಿಲೀನಗೊಳಿಸದಿರುವುದಕ್ಕೆ ಕಾರಣವೇನು ;

(ಇ) ವಿಲೀನಗೊಳಿಸದೆ ಬಾಕಿ ಉಳಿದಿರುವ ಸಿಬ್ಬಂದಿಗಳನ್ನು ವಿಲೀನಗೊಳಿಸುವ ಕುರಿತು ಸರ್ಕಾರದ ಸ್ಪಷ್ಟ ನಿಲುವೇನು ; ಪ್ರಸ್ತಾವನೆ ಯಾವ ಹಂತದಲ್ಲಿದೆ ; ಈ ಸಿಬ್ಬಂದಿಗಳಿಗೆ ಆಗಿರುವ ಅನ್ಯಾಯವನ್ನು ಸರಿಪಡಿಸುವ ಕುರಿತು ಸರ್ಕಾರ ಕೈಗೊಂಡ ಹಾಗೂ ಕೈಗೊಳ್ಳುತ್ತಿರುವ ಕ್ರಮಗಳಾವುವು ? (ಸಂಪೂರ್ಣ ವಿವರವನ್ನು ಒದಗಿಸುವುದು)

## ವೈದ್ಯಕೀಯ ವಿದ್ಯಾರ್ಥಿಗಳ ಉತ್ತರ ಪತ್ರಿಕೆಗಳ ಮೌಲ್ಯಮಾಪನ ಬಗ್ಗೆ

**ಶ್ರೀಮತಿ ಭಾರತಿ ಶೆಟ್ಟಿ (ನಾಮನಿರ್ದೇಶನ ಹೊಂದಿದವರು) :–**

೧೯೮೧ (೨೪೦೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವೈದ್ಯಕೀಯ ವಿದ್ಯಾರ್ಥಿಗಳು ಪರೀಕ್ಷೆಯಲ್ಲಿ ಬರೆದ ಉತ್ತರ ಪತ್ರಿಕೆಗಳನ್ನು ಯಾವ ರೀತಿಯಲ್ಲಿ ಮೌಲ್ಯಮಾಪನ ಮಾಡಲಾಗುತ್ತಿದೆ ;

(ಆ) ಸದರಿ ವ್ಯವಸ್ಥೆಯು ಹಿಂದಿನ ವ್ಯವಸ್ಥೆಗಿಂತ ಯಾವ ರೀತಿಯ ಗುಣಮಟ್ಟದಲ್ಲಿ ಸುಧಾರಣೆ ಕಂಡಿದೆ; ಅಥವಾ ಕಳಪೆಯಾಗಿದೆ; ಇದನ್ನು ಸುಧಾರಿಸಲು ತೆಗೆದುಕೊಂಡ ಕ್ರಮಗಳೇನು ;

(ಇ) ಸಾಮಾನ್ಯವಾಗಿ ಒಂದು ಉತ್ತರ ಪತ್ರಿಕೆ ಮೌಲ್ಯ ಮಾಪನಕ್ಕೆ ಉತ್ತಮವಾದ ಪರೀಕ್ಷಕರು ಎಷ್ಟು ಸಮಯ ತೆಗೆದುಕೊಳ್ಳುತ್ತಿದ್ದಾರೆ ; ಇದನ್ನು ವಿಶ್ವವಿದ್ಯಾನಿಲಯವು ಯಾವ ರೀತಿ ದೃಢೀಕರಿಸಿಕೊಳ್ಳುತ್ತಿದೆ ;

(ಈ) ವಿಶ್ವವಿದ್ಯಾಲಯವು ಗುರುತಿಸಿದ ಮೌಲ್ಯಮಾಪಕರೇ ಉತ್ತರ ಪತ್ರಿಕೆಗಳನ್ನು ಮೌಲ್ಯಮಾಪನ ಮಾಡುತ್ತಿರುವ ಬಗ್ಗೆ ಮಾಹಿತಿ ಹೊಂದಲು ಯಾವ ವ್ಯವಸ್ಥೆ ಹೊಂದಿದೆ ;

(ಉ) ೩ ರಿಂದ ೫ ನಿಮಿಷಗಳಲ್ಲಿ ಉತ್ತರ ಪತ್ರಿಕೆಗಳ ಮೌಲ್ಯಮಾಪನವಾಗುತ್ತಿದೆ ಎಂಬ ವಿದ್ಯಾರ್ಥಿಗಳ ಅಳಲನ್ನು ವಿಶ್ವವಿದ್ಯಾನಿಲಯ ಯಾವ ರೀತಿ ದೂರ ಮಾಡುತ್ತದೆ ?

## ಬಡ್ತಿ ಹೊಂದಿದ ಶಿಕ್ಷಕರುಗಳಿಗೆ ಕಾಲಮಿತಿ ಬಡ್ತಿ ನೀಡುವ ಬಗ್ಗೆ

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :-**

೧೯೮೨ (೨೩೧೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪ್ರಾಥಮಿಕ ಶಾಲೆಯಿಂದ ಪ್ರೌಢಶಾಲೆಗೆ ಬಡ್ತಿ ಹೊಂದಿದ ಶಿಕ್ಷಕರುಗಳಿಗೆ ೧೦, ೧೫, ೨೦, ೨೫ ವರ್ಷಗಳ ಕಾಲಮಿತಿ ಬಡ್ತಿಯನ್ನು ನೀಡಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಬೇರೆ ಇಲಾಖೆಗಳಂತೆ ಸರ್ಕಾರ ಶಿಕ್ಷಕರ ವರ್ಗಾವಣೆ ಪ್ರಕ್ರಿಯೆ ಸಕಾಲಕ್ಕೆ ನಡೆಸದೆ ಅವರನ್ನು ಮಲತಾಯಿ ಮಕ್ಕಳಂತೆ ನಡೆಸಿಕೊಳ್ಳುತ್ತಿರುವುದೇಕೆ ; ಶೀಘ್ರವಾಗಿ ಶಿಕ್ಷಕರ ವರ್ಗಾವಣೆ ನಡೆಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಪ್ರೌಢಶಾಲೆ ಸಹ ಶಿಕ್ಷಕ ಹುದ್ದೆಯಿಂದ ಪದವಿ ಪೂರ್ವ ಉಪನ್ಯಾಸಕ ಹುದ್ದೆಗೆ ಬಡ್ತಿ ಪ್ರಕ್ರಿಯೆಗೆ ಚಾಲನೆ ನೀಡಲು ಕೈಗೊಂಡಿರುವ ಕ್ರಮಗಳೇನು ;

(ಈ) ದೈಹಿಕ ಶಿಕ್ಷಣ ಶಿಕ್ಷಕರಿಗೆ ವೈದ್ಯನಾಥನ್ ವರದಿ ಶಿಫಾರಸ್ಸುಗಳನ್ನು ಜಾರಿಗೊಳಿಸಲು ಕೈಗೊಂಡಿರುವ ಕ್ರಮಗಳೇನು ?

## ರಾಜ್ಯದಲ್ಲಿ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ಬಗ್ಗೆ

**ಡಾ|| ಚಂದ್ರಶೇಖರ್ ಬಿ. ಪಾಟೀಲ್ (ಪದವೀಧರರ ಕ್ಷೇತ್ರ) :-**

೧೯೮೩ (೨೩೦೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು ;

(ಆ) ಸದರಿ ಕಾಲೇಜುಗಳಲ್ಲಿ ನೇರ ನೇಮಕಾತಿಯಾಗಿ ಕಾರ್ಯನಿರ್ವಹಿಸುತ್ತಿರುವ ಉಪನ್ಯಾಸಕರುಗಳ ಸಂಖ್ಯೆ ಎಷ್ಟು ;

(ಇ) ಪ್ರೌಢ ಶಾಲೆಯಿಂದ ಪದವಿ ಕಾಲೇಜಿಗೆ ಮುಂಬಡ್ತಿ ಹೊಂದಿರುವವರ ಸಂಖ್ಯೆ ಎಷ್ಟು ? (ತಾಲ್ಲೂಕುವಾರು ಮುಂಬಡ್ತಿ ಹೊಂದಿರುವವರ ಹೆಸರು, ಶಾಲಾ ಕಾಲೇಜು ಮತ್ತು ವಿಳಾಸದ ವಿವರಗಳನ್ನು ನೀಡುವುದು)

## ೨೦೨೧ರವರೆಗೆ ಸರ್ಕಾರಿ ಪ್ರೌಢಶಾಲೆಗಳಲ್ಲಿ ಶಿಕ್ಷಕರ ನೇರ ನೇಮಕಾತಿ ಬಗ್ಗೆ

**ಡಾ॥ ಚಂದ್ರಶೇಖರ್ ಬಿ. ಪಾಟೀಲ್ (ಪದವೀಧರರ ಕ್ಷೇತ್ರ) :–**

೧೯೮೪ (೨೩೦೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೧ರ ಜನವರಿಯವರೆಗೆ ಸರ್ಕಾರಿ ಪ್ರೌಢ ಶಾಲೆಗಳಲ್ಲಿ ನೇರ ನೇಮಕಾತಿ ಹೊಂದಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರುಗಳ ಸಂಖ್ಯೆ ಎಷ್ಟು ;

(ಆ) ಪ್ರಾಥಮಿಕ ಶಾಲೆಯಿಂದ ಪ್ರೌಢ ಶಾಲೆಗಳಿಗೆ ಬಡ್ತಿ ಹೊಂದಿರುವವರ ಸಂಖ್ಯೆ ಎಷ್ಟು ? (ತಾಲ್ಲೂಕುವಾರು ಬಡ್ತಿ ಹೊಂದಿರುವವರ ಹೆಸರು, ಶಾಲೆಗಳ ವಿವರಗಳನ್ನು ನೀಡುವುದು)

## ಬಸವರಾಜ ಹೊರಟ್ಟಿರವರ ವರದಿ ಜಾರಿಯ ಬಗ್ಗೆ

**ಡಾ॥ ಚಂದ್ರಶೇಖರ್ ಬಿ. ಪಾಟೀಲ್ (ಪದವೀಧರರ ಕ್ಷೇತ್ರ) :–**

೧೯೮೫ (೨೩೦೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾಲ್ಪನಿಕ ವೇತನ ವಿಚಾರವಾಗಿ ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿರವರ ನೇತೃತ್ವದ ಸಮಿತಿಯು ಸಲ್ಲಿಸಿರುವ ವರದಿಯು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ವರದಿಯನ್ನು ಯಾವ ಕಾಲಮಿತಿಯೊಳಗೆ ಜಾರಿಗೆ ತರಲಾಗುವುದು; ಇಲ್ಲದಿದ್ದಲ್ಲಿ, ವರದಿಯ ಬಗ್ಗೆ ಸರ್ಕಾರ ಹೊಂದಿರುವ ಸ್ಪಷ್ಟ ನಿಲುವುಗಳೇನು ? (ವಿವರ ನೀಡುವುದು)

# ಸರ್ಕಾರಿ ಪದವಿ ಪೂರ್ವ ಉಪನ್ಯಾಸಕರ ನೇಮಕಾತಿ ವೃಂದಗಳ ಬಗ್ಗೆ

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :-**

೧೯೮೬ (೨೩೮೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರಿ ಪದವಿ ಪೂರ್ವ ಕಾಲೇಜು ಉಪನ್ಯಾಸಕರ ಮತ್ತು ನೇಮಕಾತಿ ವೃಂದಗಳ ನಿಯಾಮಾವಳಿಯ ಪ್ರಕಾರ ಶೇ ೫೦ ನೇರ ನೇಮಕಾತಿ ಮತ್ತು ಶೇ ೫೦ ರಷ್ಟು ಸ್ನಾತಕೋತ್ತರ ಪದವಿ ಪಡೆದ ಪ್ರೌಢಶಾಲಾ ಸಹ ಶಿಕ್ಷಕರರಿಂದ ಬಡ್ತಿ ಮೂಲಕ ೨೦೧೪ರವರೆಗೆ ನಿಯಮಾನುಸಾರ ನೇಮಕಾತಿ ಮಾಡಲಾಗಿದೆಯೇ ;

(ಆ) ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ಜ್ಯೇಷ್ಠತಾ ಪಟ್ಟಿ ತಯಾರಿಸುವಾಗ ಕರ್ನಾಟಕ ರಾಜ್ಯ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ : ಸಿಆಸುಇ ೪೩ ಸೇಕನಿ ೮೭ ದಿನಾಂಕ : ೧೪-೧೨-೧೯೮೭ ರ ಆದೇಶವನ್ನು ಮತ್ತು ಕರ್ನಾಟಕ ಆಡಳಿತ ನ್ಯಾಯ ಮಂಡಳಿ ಅರ್ಜಿ ಸಂಖ್ಯೆ : ೩೭೩೮-೩೭೫೬/೨೦೦೯ ದಿನಾಂಕ : ೨೭-೦೯-೨೦೧೦ರ ತೀರ್ಪನ್ನು ಪಾಲಿಸಲಾಗಿದೆಯೇ ;

(ಇ) ಹಲವಾರು ವರ್ಷಗಳಿಂದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ಜ್ಯೇಷ್ಠತಾ ಪಟ್ಟಿಯಲ್ಲಿ ನ್ಯೂನತೆಗಳು ಇದುದ್ದರಿಂದ ಹಲವು ಉಪನ್ಯಾಸಕರು, ಬಡ್ತಿಯಿಂದ ವಂಚಿತರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ಜ್ಯೇಷ್ಠತಾ ಪಟ್ಟಿಯನ್ನು ನಿಯಾಮಾನುಸಾರ ಲೋಪದೋಷಗಳಿಲ್ಲದೇ ಸಿದ್ದಪಡಿಸಲು ಪದವಿ ಪೂರ್ವ ಶಿಕ್ಷಣ ಇಲಾಖೆಗೆ ಯಾವ ಕಾಲಮಿತಿಯೊಳಗೆ ನೀಡಲಾಗುವುದು ? (ಮಾಹಿತಿ ನೀಡುವುದು)

## ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ GPT ಮತ್ತು PST ವೃಂದದ ಬಗ್ಗೆ

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :–**

೧೯೮೭ (೨೩೮೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ ೮ನೇ ತರಗತಿ ಪ್ರಾರಂಭಿಸಿರುವ ಶಾಲೆಗಳ ಸಂಖ್ಯೆ ಎಷ್ಟು ; ಇನ್ನೂ ಪ್ರಾರಂಭಿಸಬೇಕಾದ ಒಟ್ಟು ಶಾಲೆಗಳೆಷ್ಟು ;

(ಆ) ೬ ರಿಂದ ೮ನೇ ತರಗತಿಗಳಿಗೆ ಬೋಧಿಸುತ್ತಿರುವ ಶಿಕ್ಷಕರೆಷ್ಟು; ನೇರ ನೇಮಕಾತಿ ಹೊಂದಿದ GPT (೬–೮ ತರಗತಿ) ಪದವೀಧರ ಶಿಕ್ಷಕರಲ್ಲಿ ಕಾರ್ಯನಿರ್ವಹಿಸುತ್ತಿರುವ ವಿಷಯವಾರು ಶಿಕ್ಷಕರೆಷ್ಟು;

(ಇ) ೧–೫ನೇ ತರಗತಿ ವೃಂದದಲ್ಲಿ ಮಂಜೂರಾದ ಹುದ್ದೆಗಿಂತ ಹೆಚ್ಚುವರಿ ಇರುವ ಶಿಕ್ಷಕರ ಸಂಖ್ಯೆ ಎಷ್ಟು ; ಹಾಗೂ ಹೆಚ್ಚುವರಿ GPT (೧–೫) ವೃಂದದಲ್ಲಿರುವ ಅರ್ಹ ಪದವೀಧರ ಶಿಕ್ಷಕರನ್ನು GPT (೬–೮) ವೃಂದದಲ್ಲಿ ವಿಲೀನಗೊಳಿಸಲು ಕಾನೂನಿನಲ್ಲಿರುವ ಸಕಾರಾತ್ಮಕ ಅಂಶಗಳೇನು ;

(ಈ) One Time Measurement ಮಾನದಂಡ ಆಧರಿಸಿ PST (೧ ರಿಂದ ೭ ನೇ ತರಗತಿ) ಮೂಲ ವೃಂದದಲ್ಲಿನ ಪದವೀಧರ ಶಿಕ್ಷಕರಿಗೆ ನ್ಯಾಯ ನೀಡಲು ದಿನಾಂಕ : ೧೯–೦೫–೨೦೧೭ರ ಹೊಸ ವೃಂದ ಬಲ ಆದೇಶದ ಪುನರ್ ವರ್ಗೀಕರಣ ಮಾಡಬಹುದಲ್ಲವೇ ? (ಮಾಹಿತಿ ನೀಡುವುದು)

## ಪ್ರವಾಸೋದ್ಯಮ ಅಭಿವೃದ್ಧಿ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೯೮೮ (೨೩೮೯) ಮಾನ್ಯ ಪ್ರವಾಸೋದ್ಯಮ ಮತ್ತು ಪರಿಸರ ಮತ್ತು ಜೀವಿ ಪರಿಸ್ಥಿತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರವಾಸೋದ್ಯಮ ಅಭಿವೃದ್ಧಿಗೆ ಹೊಸದಾಗಿ ಯಾವ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆ ; ಇದಕ್ಕಾಗಿ ಎಷ್ಟು ಹಣವನ್ನು ಮೀಸಲಿಡಲಾಗಿದೆ ;

(ಆ) ಕರ್ನಾಟಕದ ಯಾವ ಯಾವ ಪ್ರೇಕ್ಷಣೀಯ ಸ್ಥಳಗಳನ್ನು ಪ್ರವಾಸಿ ತಾಣವಾಗಿ ಅಭಿವೃದ್ಧಿಪಡಿಸಲು ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ; (ವಿವರಗಳನ್ನು ನೀಡುವುದು)

(ಇ) ಬೆಂಗಳೂರಿನ ರೇಸ್ ಕೋರ್ಸ್‌ನ್ನು ಹೊರವಲಯಕ್ಕೆ ಸ್ಥಳಾಂತರಿಸಿ ಆ ಜಾಗದಲ್ಲಿ ಸೌಂಡ್ ಅಂಡ್ ಲೈಟ್ ಅಳವಡಿಸಿ ಪ್ರವಾಸಿ ತಾಣವನ್ನಾಗಿ ಮಾಡಬೇಕೆಂದು ಹಿಂದೆ ತೀರ್ಮಾನ ಕೈಗೊಂಡಿದ್ದು ಆ ಯೋಜನೆ ಕಾರ್ಯಗತವಾಗುತ್ತದೆಯೇ ?

## ಮೈಸೂರು ಜಿಲ್ಲಾ ಆಸ್ಪತ್ರೆಗೆ ಪೀಠೋಪಕರಣ ವ್ಯವಸ್ಥೆ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೯೮೯ (೨೩೮೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರಿನ ಕೆ.ಆರ್.ಎಸ್ ರಸ್ತೆಯಲ್ಲಿರುವ ಜಿಲ್ಲಾ ಆಸ್ಪತ್ರೆ ಮತ್ತು ಸಾಂಕ್ರಾಮಿಕ ರೋಗಗಳ ಆಸ್ಪತ್ರೆ ಹೊಸದಾಗಿ ಪ್ರಾರಂಭವಾಗಿದ್ದು, ಅಲ್ಲಿ ಪೀಠೋಪಕರಣ ಮತ್ತು ಯಂತ್ರೋಪಕರಣಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹೊಸದಾಗಿ ಈ ಆಸ್ಪತ್ರೆ ಪ್ರಾರಂಭವಾಗಿರುವುದರಿಂದ ಹಾಗೂ ಕೋವಿಡ್ ಆಸ್ಪತ್ರೆಯಾಗಿಯೂ ಇದು ಘೋಷಣೆಯಾಗಿರುವುದರಿಂದ ಪೀಠೋಪಕರಣ ಮತ್ತು ಯಂತ್ರೋಪಕರಣವನ್ನು ಒದಗಿಸಲು ಸರ್ಕಾರ ಕ್ರಮ ತೆಗೆದುಕೊಳ್ಳುತ್ತದೆಯೇ ;

(ಇ) ರೋಗಿಗಳ ಹಿತದೃಷ್ಟಿಯಿಂದ ಕೂಡಲೇ ಅನುದಾನ ಒದಗಿಸಿ ಪೀಠೋಪಕರಣ ಮತ್ತು ಯಂತ್ರೋಪಕರಣಗಳನ್ನು ಒದಗಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಪದವಿ ಪೂರ್ವ ಕಾಲೇಜುಗಳಲ್ಲಿ ದೈಹಿಕ ಶಿಕ್ಷಕರ ಖಾಲಿ ಹುದ್ದೆಗಳ ಕುರಿತು

**ಶ್ರೀ ಅ. ದೇವೇಗೌಡ (ಪದವೀಧರರ ಕ್ಷೇತ್ರ) :–**

೧೯೯೦ (೨೩೯೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಾಥಮಿಕ, ಪ್ರೌಢ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ದೈಹಿಕ ಶಿಕ್ಷಣ ಶಿಕ್ಷಕರು/ ಉಪನ್ಯಾಸಕರುಗಳ ಸಂಖ್ಯೆ ಎಷ್ಟು ; (ಮಾಹಿತಿ ನೀಡುವುದು)

(ಆ) ಖಾಲಿ ಇರುವ ದೈಹಿಕ ಶಿಕ್ಷಣದ ಹುದ್ದೆಗಳ ಭರ್ತಿಗೆ ಕ್ರಮ ವಹಿಸಲಾಗಿದೆಯೇ ;

(ಇ) ಯಾವ ಕಾಲಮಿತಿಯಲ್ಲಿ ಹುದ್ದೆಗಳ ಭರ್ತಿಗೆ ಕ್ರಮ ವಹಿಸಲಾಗುವುದು ?

## ಪದವಿ ಪೂರ್ವ ಕಾಲೇಜುಗಳಲ್ಲಿ ದೈಹಿಕ ಶಿಕ್ಷಕರ ಬಡ್ತಿ ಬಗ್ಗೆ

**ಶ್ರೀ ಅ. ದೇವೇಗೌಡ (ಪದವೀಧರರ ಕ್ಷೇತ್ರ) :-**

೧೯೯೧ (೨೩೯೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪದವಿ ಪೂರ್ವ ಕಾಲೇಜುಗಳಿಗೆ ದೈಹಿಕ ಶಿಕ್ಷಕರನ್ನು ಉಪನ್ಯಾಸಕರಾಗಿ ಬಡ್ತಿ ನೀಡುವ ಪ್ರಕ್ರಿಯೆ ಯಾವ ಹಂತದಲ್ಲಿದೆ ;

(ಆ) ಪ್ರಕ್ರಿಯೆ ಪೂರ್ಣಗೊಳಿಸಲು ಕಾಲಮಿತಿ ನಿಗದಿಪಡಿಸಲಾಗಿದೆಯೇ ?

## ಪ್ರೊ. ಎಲ್.ಆರ್. ವೈದ್ಯನಾಥನ್ ವರದಿ ಜಾರಿಗೊಳಿಸುವ ಬಗ್ಗೆ

**ಶ್ರೀ ಅ. ದೇವೇಗೌಡ (ಪದವೀಧರರ ಕ್ಷೇತ್ರ) :-**

೧೯೯೨ (೨೩೯೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪ್ರೊ. ಎಲ್.ಆರ್.ವೈದ್ಯನಾಥನ್ ವರದಿಯನ್ನು ಸರ್ಕಾರ ಸಂಪೂರ್ಣವಾಗಿ ಜಾರಿಗೆ ತಂದಿದೆಯೇ ;

(ಆ) ದೈಹಿಕ ಶಿಕ್ಷಣ ಶಿಕ್ಷಕರನ್ನು ಸಹ ಶಿಕ್ಷಕರೆಂದು ಪರಿಗಣಿಸಲಾಗಿದೆಯೇ ;

(ಇ) ಪರಿಗಣಿಸಿದ್ದಲ್ಲಿ ಮಾಹಿತಿಯನ್ನು ನೀಡುವುದು ?

## ಉರ್ದು ಶಾಲೆಗಳ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೯೯೩ (೨೩೪೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಎಷ್ಟು ಉರ್ದು ಶಾಲೆಗಳಿವೆ; ಇಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; ಈ ಶಾಲೆಗಳಿಗೆ ಮಂಜೂರಾದ ಹಾಗೂ ಖಾಲಿ ಇರುವ ಹುದ್ದೆಗಳೆಷ್ಟು; (ಶಾಲಾವಾರು ಮಾಹಿತಿ ನೀಡುವುದು)

(ಆ) ಉರ್ದು ಭಾಷೆಯಲ್ಲಿ ಎಸ್.ಎಸ್.ಎಲ್.ಸಿ. ಪಾಸಾದ ವಿದ್ಯಾರ್ಥಿಗಳು ಪಿ.ಯು.ಸಿ. ವ್ಯಾಸಂಗ ಮಾಡಲು ರಾಜ್ಯದಲ್ಲಿರುವ ಉರ್ದು ಕಾಲೇಜುಗಳೆಷ್ಟು ; (ವಿವರ ನೀಡುವುದು)

(ಇ) ಇಲಾಖೆಯಿಂದ ಉರ್ದು ಭಾಷೆ ವಿದ್ಯಾರ್ಥಿಗಳಿಗೆ ನೀಡುತ್ತಿರುವ ಸೌಲಭ್ಯಗಳೇನು ? (ಸಂಪೂರ್ಣ ವಿವರ ನೀಡುವುದು)

## ಎಬಿಎಆರ್‌ಕೆ ಗುರುತಿನ ಚೀಟಿಗಳನ್ನು ವಿತರಿಸುತ್ತಿರುವ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೯೯೪ (೨೩೪೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾಸನ ಜಿಲ್ಲೆಯಲ್ಲಿ ಕಳೆದ ೨ ವರ್ಷಗಳಲ್ಲಿ ಎಬಿಎಆರ್‌ಕೆ ಗುರುತಿನ ಚೀಟಿಗಳನ್ನು ನೀಡುವ ಅಭಿಯಾನವನ್ನು ಆಯೋಜಿಸಲಾಗಿದೆಯೇ ; ಹಾಗಿದ್ದಲ್ಲಿ, ಈ ಅಭಿಯಾನದಲ್ಲಿ ಎಷ್ಟು ಜನ ಫಲಾನುಭವಿಗಳನ್ನು ಗುರುತಿಸಲಾಗಿದೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಈ ಅಭಿಯಾನದಲ್ಲಿ ಗುರುತಿಸಲಾದ ಫಲಾನುಭವಿಗಳಿಗೆ ಗುರುತಿನ ಚೀಟಿಗಳನ್ನು ವಿತರಿಸಲಾಗಿದೆಯೇ ; ಹಾಗಿದ್ದಲ್ಲಿ, ಎಷ್ಟು ಫಲಾನುಭವಿಗಳಿಗೆ ವಿತರಿಸಲಾಗಿದೆ ; ಬಾಕಿ ಉಳಿದಿರುವ ಫಲಾನುಭವಿಗಳಿಗೆ ಯಾವ ಕಾಲಮಿತಿಯೊಳಗೆ ವಿತರಿಸಲಾಗುವುದು ; (ಫಲಾನುಭವಿಗಳ ವಿವರಗಳೊಂದಿಗೆ ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಎಬಿಎಆರ್‌ಕೆ ಗುರುತಿನ ಚೀಟಿಗಳನ್ನು ನೀಡಲು ಅನುಸರಿಸುತ್ತಿರುವ ಮಾನದಂಡಗಳೇನು ; ಇದರಡಿ ಫಲಾನುಭವಿಗಳು ಯಾವ ಯಾವ ಚಿಕಿತ್ಸೆಗಳನ್ನು ಎಲ್ಲೆಲ್ಲಿ ಪಡೆಯಬಹುದಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಈ) ಕೇಂದ್ರ ಮತ್ತು ರಾಜ್ಯ ಸರ್ಕಾರ ಜಾರಿಗೊಳಿಸಿರುವ ಈ ಯೋಜನೆಯನ್ನು ಸಾರ್ವಜನಿಕರಿಗೆ ತಲುಪಿಸುವಲ್ಲಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಗುರುತಿಸಿರುವ ಎಲ್ಲಾ ಫಲಾನುಭವಿಗಳಿಗೆ ಸರಿಯಾದ ಸಮಯಕ್ಕೆ ಇದರ ಪ್ರಯೋಜನ ಪಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ರಾಜ್ಯದ ಸಮುದ್ರ ತೀರ ಮತ್ತು ನದಿ ಭಾಗಗಳಲ್ಲಿ ನಡೆಸುತ್ತಿರುವ ವಾಟರ್ ಗೇಮ್ಸ್‌ಗಳ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೯೯೫ (೨೩೪೩) ಮಾನ್ಯ ಪ್ರವಾಸೋದ್ಯಮ ಮತ್ತು ಪರಿಸರ ಮತ್ತು ಜೀವಿಪರಿಸ್ಥಿತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಯಾವ ಯಾವ ಸಮುದ್ರ ತೀರ ಮತ್ತು ನದಿ ಭಾಗಗಳಲ್ಲಿ ವಾಟರ್ ಗೇಮ್ಸ್‌ಗಳನ್ನು ನಡೆಸಲು ಅನುಮತಿ ನೀಡಲಾಗುತ್ತಿದೆ ; ಇಲ್ಲಿ ಯಾವ ಯಾವ ಕ್ರೀಡೆಗಳನ್ನು ನಡೆಸಲು ಮತ್ತು ಯಾವ ಯಾವ ಏಜೆನ್ಸಿ/ಕಂಪನಿಗಳಿಗೆ ಎಷ್ಟು ವರ್ಷಗಳಿಗೆ ಅನುಮತಿ ನೀಡಲಾಗಿದೆ ; (ಆದೇಶ ಸಹಿತ ಪ್ರಕರಣವಾರು ವಿವರ ನೀಡುವುದು)

(ಆ) ಈ ಸಾಹಸ ಕ್ರೀಡೆಗಳನ್ನು ನಡೆಸುವ ಏಜೆನ್ಸಿ/ಕಂಪನಿಗಳನ್ನು ಆಯ್ಕೆ ಮಾಡಲು ಟೆಂಡರ್‌ಗಳನ್ನು ಕರೆಯಲಾಗುತ್ತಿದೆಯೇ ಅಥವಾ ಬೇರೆ

ಯಾವುದಾದರೂ ಮಾನದಂಡಗಳ ಮೇಲೆ ಆಯ್ಕೆ ಮಾಡಲಾಗುತ್ತಿದೆಯೇ ; ಇದಕ್ಕೆ ಅನುಮತಿ ನೀಡಲು ಸರ್ಕಾರವು ನಿಗದಿಪಡಿಸಿರುವ ಮಾನದಂಡಗಳೇನು ; (ಆದೇಶ ಸಹಿತ ವಿವರ ನೀಡುವುದು)

(ಇ) ಇಲ್ಲಿ ನಡೆಸುವಂತಹ ಕ್ರೀಡೆಗಳಿಗೆ ದರಗಳನ್ನು ನಿಗದಿ ಮಾಡಲಾಗಿದೆಯೇ ; ಮಾಡಿದ್ದಲ್ಲಿ, ಅವುಗಳ ವಿವರ ನೀಡುವುದು ;

(ಈ) ಕಾಳಿ ನದಿಯ ತೀರದಲ್ಲಿ ಇರುವ ಹೋಟೆಲ್ ಮತ್ತು ರೆಸಾರ್ಟ್‌ಗಳು ಅಕ್ರಮವಾಗಿ ಇಂತಹ ಕ್ರೀಡೆಗಳನ್ನು ನಡೆಸುತ್ತಿದ್ದು ಸಾರ್ವಜನಿಕರಿಂದ ಬೇಕಾಬಿಟ್ಟಿಯಾಗಿ ಹಣ ವಸೂಲಿ ಮಾಡುತ್ತಿರುವುದು ಮತ್ತು ಸುರಕ್ಷತಾ ಕ್ರಮಗಳನ್ನು ಕೈಗೊಳ್ಳದೇ ಇದನ್ನೇ ದಂಧೆ ಮಾಡಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಅವರುಗಳಿಗೆ ಸರ್ಕಾರದಿಂದ ಅನುಮತಿ/ಪರವಾನಗಿ ನೀಡಲಾಗಿದೆಯೇ ; ಈ ಸಂಬಂಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಊ) ಇಂತಹ ಕ್ರೀಡೆಗಳನ್ನು ನಡೆಸುವವರಿಗೆ ಸರ್ಕಾರ ನೀಡುತ್ತಿರುವ ಸವಲತ್ತುಗಳೇನು ಮತ್ತು ಈ ಕ್ರೀಡೆಗಳಿಗೆ ಅನುಮತಿ ನೀಡಿರುವುದರಿಂದ ಕಳೆದ ೩ ವರ್ಷಗಳಲ್ಲಿ ಸರ್ಕಾರಕ್ಕೆ ಬಂದಿರುವ ಆದಾಯವೆಷ್ಟು ? (ವಿವರ ನೀಡುವುದು)

## ಶಿವಮೊಗ್ಗ ಜಿಲ್ಲೆಯಲ್ಲಿ ವೈದ್ಯಕೀಯ ಶಿಕ್ಷಣ ಕಾಲೇಜು ನಿರ್ಮಾಣ

**ಶ್ರೀ ಬಿ.ಕೆ. ಹರಿಪ್ರಸಾದ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೯೯೬ (೨೩೬೫) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಿವಮೊಗ್ಗ ಜಿಲ್ಲೆಯಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜು ನಿರ್ಮಾಣದ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ಹಾಗಿದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು ? (ಸಂಪೂರ್ಣ ವಿವರ ಒದಗಿಸುವುದು)

## ಅನುದಾನಿತ ಪದವಿ ಪೂರ್ವ ಕಾಲೇಜುಗಳ ಕಾರ್ಯಭಾರ ಹಂಚಿಕೆ ಮಾಡುವ ಬಗ್ಗೆ

**ಶ್ರೀ ಕಾಂತರಾಜ್ (ಬಿ.ಎಂ.ಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೯೯೭ (೨೩೩೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ/ಅನುದಾನಿತ– ಅನುದಾನರಹಿತ ಪದವಿ ಪೂರ್ವ ಕಾಲೇಜುಗಳೆಷ್ಟು ; (ಜಿಲ್ಲಾವಾರು ವಿವರ ಒದಗಿಸುವುದು)

(ಆ) ಕಾರ್ಯಭಾರ ಅಂದರೇನು ; ಪದವಿ ಪೂರ್ವ ಉಪನ್ಯಾಸಕರಿಗೆ ಸರ್ಕಾರವು ಒಂದು ವಾರಕ್ಕೆ ಎಷ್ಟು ಗಂಟೆಗಳ ಕಾರ್ಯಭಾರವನ್ನು ನಿಗದಿಪಡಿಸಲಾಗಿದೆ ; ಕಾರ್ಯಭಾರ ನಿಗದಿಪಡಿಸಲು ಇರುವ ಮಾನದಂಡಗಳೇನು ;

(ಇ) ಪದವಿ ಪೂರ್ವ ಶಿಕ್ಷಣ ಇಲಾಖೆಯಲ್ಲಿ ಖಾಸಗಿ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ದಿನಾಂಕ : ೩೧.೧೨.೨೦೧೫ ರವರೆಗೆ ನಿಧನ, ನಿವೃತ್ತಿ ಹಾಗೂ ರಾಜೀನಾಮೆಯಿಂದ ತೆರವಾದ ಬೋಧಕ ಹುದ್ದೆಗಳನ್ನು ತುಂಬಿಕೊಳ್ಳಲು ಅನುಮತಿ ನೀಡಿರುವುದು ನಿಜವೇ ;

(ಈ) ಹಾಗಾದಲ್ಲಿ, ದಿನಾಂಕ : ३೧.೧೨.೨೦೨೦ರ ಅಂತ್ಯಕ್ಕೆ ಖಾಸಗಿ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ಕಾರ್ಯಭಾರದ ಕೊರತೆಯಿದ್ದು, ಈ ಕಾರ್ಯಭಾರವನ್ನು ಪಕ್ಕದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿನ ಕಾರ್ಯಭಾರಕ್ಕೆ ಹೊಂದಾಣಿಕೆ ಮಾಡಿರುವ ಪ್ರಕರಣಗಳೆಷ್ಟು ? (ವಿವರವಾಗಿ ಜಿಲ್ಲಾವಾರು ಸಂಪೂರ್ಣ ಕಾಲೇಜಿನ ವಿಳಾಸ ಹಾಗೂ ಹುದ್ದೆಯ ಪದನಾಮದೊಂದಿಗೆ ವಿವರವಾದ ಮಾಹಿತಿಯನ್ನು ನೀಡುವುದು)

## ರಾಜ್ಯದಲ್ಲಿ ಖಾಸಗಿ ವಸತಿ ಶಾಲೆಗಳನ್ನು ತೆರೆಯುವ ಬಗ್ಗೆ

**ಶ್ರೀ ಕಾಂತರಾಜ್ (ಬಿ.ಎಂ.ಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೯೮ (೨३३೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಖಾಸಗಿ ವಸತಿ ಶಾಲೆಗಳಿಗೆ ಅನುಮತಿ ನೀಡಲು ನಿಯಮಾವಳಿಗಳಲ್ಲಿ ಅವಕಾಶವಿದೆಯೇ ;

(ಆ) ರಾಜ್ಯದಲ್ಲಿ ಖಾಸಗಿ ವಸತಿ ಶಾಲೆಗಳು ಇಲಾಖೆಯ ಅನುಮತಿ ಪಡೆದು ನಡೆಯುತ್ತಿರುವುದು ನಿಜವೇ ;

(ಇ) ಹಾಗಿದ್ದಲ್ಲಿ, ಯಾವ ಸ್ಥಳಗಳಲ್ಲಿ ಖಾಸಗಿ ವಸತಿ ಶಾಲೆಗಳು ನಡೆಯುತ್ತಿವೆ ; (ವಿವರ ನೀಡುವುದು)

(ಈ) ಧಾರವಾಡದಲ್ಲಿ ೮ ರಿಂದ ೧೦ನೇ ತರಗತಿವರೆಗೆ ಖಾಸಗಿ ಶಾಲೆ ನಡೆಸಲು ೨೦೧೨-೧३ನೇ ಸಾಲಿನಲ್ಲಿ ಆಯುಕ್ತಾಲಯವು ಅನುಮತಿ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ನಿಯಮಾವಳಿಗಳಲ್ಲಿ ಅವಕಾಶವಿಲ್ಲದಿದ್ದರೂ ಖಾಸಗಿ ಶಾಲೆಗಳಿಗೆ ಅನುಮತಿ ನೀಡಿದ ಅಧಿಕಾರಿಗಳ ವಿರುದ್ಧ ಸರ್ಕಾರ ಶಿಸ್ತಿನ ಕ್ರಮ ಕೈಗೊಳ್ಳಲಿದೆಯೇ ;

(ಊ) ನಿಯಮಾವಳಿಗಳಲ್ಲಿ ಅವಕಾಶವಿಲ್ಲದಿದ್ದರೂ, ಧಾರವಾಡದಲ್ಲಿನ ಖಾಸಗಿ–ವಸತಿ ಶಾಲೆಗಳ ಪರವಾನಿಗೆ/ಅನುಮತಿ ರದ್ದುಪಡಿಸಲು ಇಲಾಖೆ ಕ್ರಮ ಕೈಗೊಳ್ಳಲಿದೆಯೇ ;

(ಋ) ಈ ಕುರಿತು ಯಾವ ಕಾಲಮಿತಿಯಲ್ಲಿ ಕ್ರಮ ಕೈಗೊಳ್ಳಲಾಗುವುದು ?

## ಬ್ಯಾಂಕ್‌ಗಳಲ್ಲಿ ಗ್ರಾಹಕರೊಂದಿಗೆ ಕನ್ನಡದಲ್ಲಿ ವ್ಯವಹರಿಸುವ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ್ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೯೯೯ (೨೩೫೭) ಮಾನ್ಯ ಅರಣ್ಯ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೇಂದ್ರ ಭಾಷಾ ನೀತಿಯನ್ವಯ ರಾಜ್ಯದಲ್ಲಿನ ಎಲ್ಲಾ ಬ್ಯಾಂಕುಗಳು ಗ್ರಾಹಕರೊಂದಿಗೆ ಕನ್ನಡದಲ್ಲಿಯೇ ವ್ಯವಹರಿಸಬೇಕೆಂಬ ನಿಯುಮವಿದ್ದರೂ ಬ್ಯಾಂಕುಗಳ ಸೇವೆಗಳಲ್ಲಿ ಕನ್ನಡ ಅವಗಣನೆಯಾಗುತ್ತಿರುವ ವರದಿಯನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆಯೇ ;

(ಆ) ರಾಜ್ಯ ಬ್ಯಾಂಕರುಗಳ ಸಮಿತಿ ಸಭೆಯಲ್ಲಿ ಬ್ಯಾಂಕುಗಳಲ್ಲಿ ಕನ್ನಡ ಬಳಕೆಯು ಬಗ್ಗೆ ಪ್ರಸ್ತಾಪವಾಗುತ್ತಿದ್ದರೂ ಅನುಷ್ಠಾನದ ಕೊರತೆಯಾಗುವುದಕ್ಕೆ ಕಾರಣವೇನು ;

(ಇ) ರಾಜ್ಯದಲ್ಲಿ ಎಲ್ಲಾ ಬ್ಯಾಂಕುಗಳಲ್ಲಿ ಅರ್ಜಿ ನಮೂನೆಗಳು ಕನ್ನಡದಲ್ಲಿ ಇರಬೇಕೆಂಬ ನಿಯಮ ಕಡ್ಡಾಯವಾಗಿ ಪಾಲಿಸುವಂತೆ ಸರ್ಕಾರ ಬ್ಯಾಂಕುಗಳಿಗೆ ಸೂಚಿಸಲು ಇರುವ ತೊಂದರೆಗಳೇನು ;

(ಈ) ಬ್ಯಾಂಕ್ ನೇಮಕಾತಿಗಳಲ್ಲಿ ಕನ್ನಡಿಗರಿಗೆ ಆದ್ಯತೆ ನೀಡುವ ಬಗ್ಗೆ ನಿಯಮ ಜಾರಿಗೆ ತರುವ ಯೋಜನೆ ಸರ್ಕಾರದ ಮುಂದೆ ಇದೆಯೇ ;

(ಉ) ರಾಜ್ಯದ ಎಲ್ಲಾ ಬ್ಯಾಂಕುಗಳ ಎಟಿಎಂ ಗಳಲ್ಲಿ ಕನ್ನಡ ಭಾಷಾ ಸೌಲಭ್ಯ ಅಳವಡಿಸುವ ಬಗ್ಗೆ ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಸರ್ಕಾರಿ ಶಾಲೆಗಳಲ್ಲಿ ಶುದ್ಧ ಕುಡಿಯುವ ನೀರು ಪೂರೈಕೆ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ್ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೦೦೦ (೨೩೫೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸರ್ಕಾರಿ ಶಾಲೆಗಳಲ್ಲಿ ಸಮರ್ಪಕ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಇಲ್ಲದಿರುವ ಕುರಿತು ವರದಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಪಂಚಾಯತ್ ರಾಜ್ ಇಲಾಖೆಯ ಸಹಯೋಗದೊಂದಿಗೆ "ಜಲಜೀವನ್" ಕಾರ್ಯಕ್ರಮದ ಮುಖೇನ ಸರ್ಕಾರಿ ಶಾಲೆಗಳಿಗೆ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸುವ ಯೋಜನೆ ಯಾವ ಹಂತದಲ್ಲಿದೆ ;

(ಇ) ರಾಜ್ಯದ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಿಗೆ ಶುದ್ಧ ಕುಡಿಯುವ ನೀರಿನ ಯೋಜನೆಗೆ ಸರ್ಕಾರವು ನಿಗದಿಪಡಿಸಿದ ಅನುದಾನ/ಖರ್ಚಾದ ಅನುದಾನವೆಷ್ಟು ; (ವಿವರ ನೀಡುವುದು)

(ಈ) ಬೆಳಗಾವಿ ಜಿಲ್ಲೆಯಲ್ಲಿ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಹೊಂದಿಲ್ಲದ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳೆಷ್ಟು ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ಸಕಾಲ ಅರ್ಜಿಗಳ ವಿಲೇವಾರಿಯಲ್ಲಿ ವಿಳಂಬವಾಗುತ್ತಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ್ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೦೦೧ (೨೩೫೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಕಾಲ ಅರ್ಜಿಯನ್ನು ಕಾಲಮಿತಿಯೊಳಗೆ ವಿಲೇವಾರಿ ಮಾಡುವಂತೆ ಸೂಚನೆ ನೀಡಲಾಗಿದ್ದರೂ ಕೆಲವು ಅಧಿಕಾರಿಗಳು ವಿಳಂಬ ಧೋರಣೆ ಅನುಸರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಸದರಿ ಅಧಿಕಾರಿಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ; (ಅಧಿಕಾರಿಗಳ ಹೆಸರು ಸಹಿತ ಸಂಪೂರ್ಣ ಮಾಹಿತಿ ನೀಡುವುದು)

(ಇ) ಸಕಾಲ ಯೋಜನೆಯನ್ನು ಪರಿಣಾಮಕಾರಿಯಾಗಿಸಲು ಸರ್ಕಾರ ಯಾವ ಯಾವ ಕ್ರಮಗಳನ್ನು ಕೈಗೊಂಡಿದೆ ? (ಸಂಪೂರ್ಣ ಮಾಹಿತಿ ನೀಡುವುದು)

## ಸರ್ಕಾರಿ ಶಾಲೆಗಳಲ್ಲಿ ಶೌಚಾಲಯಗಳಿಲ್ಲದಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ್ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೦೦೨ (೨೩೫೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸ್ವಚ್ಛ ಭಾರತ್ ಆಂದೋಲನ ನಂತರವೂ ರಾಜ್ಯದಲ್ಲಿ ಬಹಳಷ್ಟು ಸರ್ಕಾರಿ ಶಾಲೆಗಳಲ್ಲಿ ಶೌಚಾಲಯಗಳಿಲ್ಲದಿರುವ ಕುರಿತು ವರದಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಅನೇಕ ಸರ್ಕಾರಿ ಶಾಲೆಗಳಲ್ಲಿ ಶೌಚಾಲಯಗಳಿದ್ದರೂ ನಿರ್ವಹಣೆಯ ಕೊರತೆಯಿಂದ ಉಪಯೋಗಕ್ಕೆ ಬಾರದ ಸ್ಥಿತಿಯಲ್ಲಿದ್ದು, ಸ್ವಚ್ಛತೆಯ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಇ) ಇಲಾಖೆಯ ವರದಿಗಳ ಪ್ರಕಾರ ರಾಜ್ಯದಲ್ಲಿ ಶೌಚಾಲಯ ರಹಿತ ಶಾಲೆಗಳ ಸಂಖ್ಯೆ ಎಷ್ಟು ; (ಮಾಹಿತಿ ನೀಡುವುದು)

(ಈ) ರಾಜ್ಯದಲ್ಲಿ ಕಳೆದ ಎರಡು ವರ್ಷಗಳ ಅವಧಿಯಲ್ಲಿ ಸರ್ಕಾರಿ ಶಾಲೆಗಳಲ್ಲಿ ಶೌಚಾಲಯಗಳ ನಿರ್ಮಾಣ ಹಾಗೂ ನಿರ್ವಹಣೆಗೆ ನೀಡಲಾದ ಅನುದಾನವೆಷ್ಟು ; (ಮಾಹಿತಿ ನೀಡುವುದು)

(ಉ) ಬೆಳಗಾವಿ ಜಿಲ್ಲೆಯಲ್ಲಿ ಶೌಚಾಲಯರಹಿತ ಸರ್ಕಾರಿ ಶಾಲೆಗಳು ಎಷ್ಟು; ಕಳೆದ ಎರಡು ವರ್ಷಗಳ ಅವಧಿಯಲ್ಲಿ ಶೌಚಾಲಯಗಳ ನಿರ್ಮಾಣ ಮತ್ತು ನಿರ್ವಹಣೆಗೆ ನೀಡಲಾಗಿರುವ ಅನುದಾನದ ಮೊತ್ತವೆಷ್ಟು ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ಮೈಸೂರು ವಿಶ್ವವಿದ್ಯಾನಿಲಯ ವ್ಯಾಪ್ತಿಯಲ್ಲಿ ಖಾಲಿ ಇರುವ ಬೋಧಕರ ಹುದ್ದೆಗಳ ಭರ್ತಿ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೨೦೦೩ (೨೩೬೭) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ವಿಶ್ವವಿದ್ಯಾನಿಲಯ, ಸ್ನಾತಕೋತ್ತರ ಕೇಂದ್ರಗಳು ಹಾಗೂ ಘಟಕ ಕಾಲೇಜುಗಳಲ್ಲಿ ನಿವೃತ್ತಿ, ರಾಜೀನಾಮೆ ಇನ್ನಿತರೆ ಕಾರಣಗಳಿಂದ ಖಾಲಿ ಇರುವ ಸಹಾಯಕ ಪ್ರಾಧ್ಯಾಪಕರ, ಸಹ ಪ್ರಾಧ್ಯಾಪಕರ ಮತ್ತು ಪ್ರಾಧ್ಯಾಪಕರ ಹುದ್ದೆಗಳ ಸಂಖ್ಯೆ ಎಷ್ಟು; (ವಿಷಯವಾರು ಪ್ರತ್ಯೇಕವಾಗಿ ವಿವರಗಳನ್ನು ಒದಗಿಸುವುದು)

(ಆ) ಸದರಿ ವಿಶ್ವವಿದ್ಯಾನಿಲಯದ ವ್ಯಾಪ್ತಿಯಲ್ಲಿ ಭರ್ತಿ ಮಾಡಬೇಕಾಗಿರುವ ಬ್ಯಾಕ್‌ಲಾಗ್ ಹುದ್ದೆಗಳ ಸಂಖ್ಯೆ ಎಷ್ಟು; (ವಿಷಯವಾರು ಪ್ರತ್ಯೇಕವಾಗಿ ವಿವರಗಳನ್ನು ನೀಡುವುದು)

(ಇ) ದೀರ್ಘಕಾಲದಿಂದ ಸದರಿ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳದಿರುವುದರಿಂದ ಸಂಶೋಧನೆಗೆ, ಶಿಕ್ಷಣಕ್ಕೆ ಹಾಗೂ ಯು.ಜಿ.ಸಿ ಅನುದಾನದ ಬಳಕೆಗೆ ತೊಂದರೆ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ಯಾವ ಕಾಲಮಿತಿಯಲ್ಲಿ ಸದರಿ ಹುದ್ದೆಗಳನ್ನು ಯಾವ ನಿಯಮಾವಳಿ ಅನುಸರಿಸಿ ಭರ್ತಿ ಮಾಡಿಕೊಳ್ಳಲಾಗುವುದು ? (ವಿವರಗಳನ್ನು ನೀಡುವುದು)

## ಶಿಕ್ಷಕರ ಕೌನ್ಸಿಲಿಂಗ್ ವರ್ಗಾವಣೆ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೨೦೦೪ (೧೮೮೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಿಕ್ಷಕರ ವರ್ಗಾವಣೆ ಕೌನ್ಸಿಲಿಂಗ್ ಪ್ರಕ್ರಿಯೆಯನ್ನು ಚಾಲನೆಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಸದರಿ ಪ್ರಕ್ರಿಯೆಯ ವಿಳಂಬಕ್ಕೆ ಕಾರಣಗಳೇನು ; (ವಿವರಗಳನ್ನು ಒದಗಿಸುವುದು)

(ಇ) ಸದರಿ ಪ್ರಕ್ರಿಯೆಯನ್ನು ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಲಾಗುವುದು ?

## ಸರ್ಕಾರಿ ಪದವಿ ಕಾಲೇಜುಗಳ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೨೦೦೫ (೨೩೬೯) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸರ್ಕಾರಿ ಪದವಿ ಕಾಲೇಜುಗಳ ಸಂಖ್ಯೆ ಎಷ್ಟು ;

(ಆ) ಸದರಿ ಕಾಲೇಜುಗಳಲ್ಲಿ ಖಾಲಿ ಇರುವ ಪ್ರಾಂಶುಪಾಲರ ಹುದ್ದೆಗಳ ಸಂಖ್ಯೆ ಎಷ್ಟು ;

(ಇ) ದೀರ್ಘಕಾಲದಿಂದ ಖಾಯಂ ಪ್ರಾಂಶುಪಾಲರನ್ನು ನೇಮಕ ಮಾಡಿಕೊಳ್ಳದಿರಲು ಕಾರಣಗಳೇನು ; ಇದರಿಂದ ಕಾಲೇಜಿನ ಆಡಳಿತ ನಿರ್ವಹಣೆಗೆ ಮತ್ತು ಗುಣಾತ್ಮಕ ಶಿಕ್ಷಣಕ್ಕೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಾದಲ್ಲಿ ಪ್ರಾಂಶುಪಾಲರ ಹುದ್ದೆಗಳನ್ನು ಭರ್ತಿ ಮಾಡಲು ಯಾವ ನಿಯಮಗಳನ್ನು ಅನುಸರಿಸಲಾಗುತ್ತದೆ ;

(ಉ) ಯಾವ ಕಾಲಮಿತಿಯಲ್ಲಿ ಸದರಿ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲಾಗುವುದು ? (ವಿವರಗಳನ್ನು ನೀಡುವುದು)

## ಸರ್ಕಾರಿ ಇಂಜಿನೀಯರಿಂಗ್ ಕಾಲೇಜ್ ಪಾಲಿಟೆಕ್ನಿಕ್ ಕಾಲೇಜುಗಳ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೨೦೦೬ (೨೩೬೮) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ಇಂಜಿನೀಯರಿಂಗ್ ಮತ್ತು ಪಾಲಿಟೆಕ್ನಿಕ್ ಕಾಲೇಜುಗಳಲ್ಲಿ ಖಾಲಿ ಇರುವ ಬೋಧಕ/ಬೋಧಕೇತರರ ಹುದ್ದೆಗಳ ಸಂಖ್ಯೆ ಎಷ್ಟು ; (ವರ್ಗವಾರು ವಿವರಗಳನ್ನು ನೀಡುವುದು)

(ಆ) ಸದರಿ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಯಾವ ಕ್ರಮ ಕೈಗೊಳ್ಳಲಾಗುತ್ತಿದೆ ; (ವಿವರಗಳನ್ನು ನೀಡುವುದು)

(ಇ) ಸದರಿ ಕಾಲೇಜುಗಳಿಗೆ ಮೂಲಭೂತ ಸೌಲಭ್ಯಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಾದಲ್ಲಿ, ಮೂಲಭೂತ ಸಮಸ್ಯೆಗಳು ಯಾವುವು ;

(ಉ) ಸದರಿ ಸೌಲಭ್ಯಗಳ ಕೊರತೆ ನೀಗಿಸಲು ಯಾವ ಕ್ರಮ ಕೈಗೊಳ್ಳಲಾಗುತ್ತಿದೆ ?

## ರಾಜ್ಯದಲ್ಲಿರುವ ವೈದ್ಯಕೀಯ ವಿಜ್ಞಾನ ಸಂಸ್ಥೆಗಳ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೨೦೦೭ (೨೩೮೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ವೈದ್ಯಕೀಯ ವಿಜ್ಞಾನ ಸಂಸ್ಥೆಗಳನ್ನು ಎ.ಬಿ.ಸಿ ಎಂದು ಯಾವ ಮಾನದಂಡಗಳನ್ನು ಅನುಸರಿಸಿ, ಮೂರು ವಿಭಾಗಗಳಾಗಿ ವಿಂಗಡಿಸಲಾಗಿದೆ ; (ವಿವರಗಳನ್ನು ನೀಡುವುದು)

(ಆ) ಈ ರೀತಿ ವಿಂಗಡಿಸುವಾಗ ಕಾನೂನಾತ್ಮಕವಾದ ಪ್ರಕ್ರಿಯೆಗಳನ್ನು ಸಂಪೂರ್ಣವಾಗಿ ಪಾಲಿಸಲಾಗಿದೆಯೇ ; (ವಿವರಗಳನ್ನು ನೀಡುವುದು)

(ಇ) ಈ ರೀತಿ ವಿಂಗಡಣೆಯಾದ ಹಲವು ಗ್ರಾಮೀಣ ಪ್ರದೇಶಗಳಲ್ಲಿರುವ ವೈದ್ಯಕೀಯ ವಿಜ್ಞಾನ ಸಂಸ್ಥೆಗಳಲ್ಲಿ ಹಾಗೂ ಜಿಲ್ಲಾ ಆಸ್ಪತ್ರೆಗಳಲ್ಲಿ ನುರಿತ ಹಾಗೂ ಅನುಭವಿ ವೈದ್ಯರ ಸೇವೆಯಿಂದ ರೋಗಿಗಳು ವಂಚಿತಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ವೈದ್ಯಕೀಯ ವಿಜ್ಞಾನ ಸಂಸ್ಥೆಗಳನ್ನು ವಿಂಗಡಿಸುವುದರಿಂದ ವೈದ್ಯರುಗಳ ಸೇವಾ ಸ್ಥಾನಗಳನ್ನು ನಿರ್ಬಂಧಿಸಲಾಗಿದ್ದು, ಇದು ಅವರ ಸಂವಿಧಾನಾತ್ಮಕ ಹಕ್ಕನ್ನು (ಆರ್ಟಿಕಲ್ ೧೪ ರಿಂದ ೨೨) ಮೊಟಕುಗೊಳಿಸಿದಂತಾಗುತ್ತದೆ ಎಂಬುದನ್ನು ಸರ್ಕಾರ ಮನಗಂಡಿದೆಯೇ ;

(ಉ) ಹಾಗಿದ್ದಲ್ಲಿ, ಸದರಿ ಆದೇಶವನ್ನು ಹಿಂಪಡೆಯಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಪರ ನಿರ್ದೇಶಕರ ಕಛೇರಿಯನ್ನು ವಿಜಯಪುರದಲ್ಲಿ ಪ್ರಾರಂಭಿಸುವ ಬಗ್ಗೆ

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :-**

೨೦೦೮ (೨೩೬೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರಿ ಆದೇಶ ಸಂಖ್ಯೆ: ಆಕುಕ ೧೭೪ ಎಚ್.ಎಸ್.ಎಚ್ ೨೦೧೯, ಬೆಂಗಳೂರು ದಿನಾಂಕ: ೨೪/೦೭/೨೦೧೯ರ ರೀತ್ಯಾ ವಿಜಯಪುರದಲ್ಲಿ ಅಪರ ನಿರ್ದೇಶಕರ ಕಛೇರಿಯನ್ನು ಪ್ರಾರಂಭಿಸಲಾಗಿದೆಯೇ ;

(ಆ) ಪ್ರಾರಂಭವಾಗಿದ್ದಲ್ಲಿ, ಸದರಿ ಕಛೇರಿಯನ್ನು ಯಾವ ವರ್ಷದಲ್ಲಿ ಮತ್ತು ವಿಜಯಪುರದ ಯಾವ ಸ್ಥಳ ಮತ್ತು ಯಾವ ಕಟ್ಟಡದಲ್ಲಿ ಪ್ರಾರಂಭಿಸಲಾಗಿದೆ; ಈ ಕಛೇರಿಗೆ ಸ್ವಂತ ಕಟ್ಟಡ ಒದಗಿಸಲಾಗಿದೆಯೇ ;

(ಇ) ಸದರಿ ಕಛೇರಿಗೆ ಅವಶ್ಯವಿರುವ ಸಿಬ್ಬಂದಿಗಳನ್ನು ಒದಗಿಸಲಾಗಿದೆಯೇ ;

(ಈ) ಸದರಿ ಕಛೇರಿಯ ಅನುಷ್ಠಾನಕ್ಕಾಗಿ ಬಳಸಲಾಗಿರುವ ಅನುದಾನ ಎಷ್ಟು ; ಇಲ್ಲವಾದಲ್ಲಿ ಎಷ್ಟು ಅನುದಾನವನ್ನು ಮೀಸಲಿಡಲಾಗಿದೆ ;

(ಉ) ಈ ಕಛೇರಿಯ ಅಧಿಕಾರಿಗಳ ಪ್ರವಾಸಕ್ಕೆ ವಾಹನ ಸೌಲಭ್ಯ ಒದಗಿಸಲಾಗಿದೆಯೇ ?

## ಸೈಂಟಿಫಿಕ್ ಆಫೀಸರ್ ಹುದ್ದೆಗಳನ್ನು ಉನ್ನತೀಕರಿಸುವ ಬಗ್ಗೆ

**ಡಾ|| ವೈ. ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೨೦೦೯ (೨೩೫೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಔಷಧ ನಿಯಂತ್ರಣ ಇಲಾಖೆಯ "ಔಷಧ ಪರೀಕ್ಷಾಲಯ" ಪ್ರಯೋಗಾಲಯದ ಜ್ಯೂನಿಯರ್ ಸೈಂಟಿಫಿಕ್ ಆಫೀಸರ್ ಹುದ್ದೆಗಳನ್ನು ೬ನೇ ವೇತನ ಆಯೋಗದ ಶಿಫಾರಸ್ಸಿನಂತೆ ೧೩ ಸೈಂಟಿಫಿಕ್ ಆಫೀಸರ್ ಹುದ್ದೆಗಳನ್ನಾಗಿ ಉನ್ನತೀಕರಿಸುವ ಪ್ರಕ್ರಿಯೆ ಯಾವ ಹಂತದಲ್ಲಿರುತ್ತದೆ ;

(ಆ) ಇದ್ದಲ್ಲಿ, ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು ; (ಮಾಹಿತಿ ನೀಡುವುದು)

(ಇ) ಔಷಧ ಪರೀಕ್ಷಾ ಪ್ರಯೋಗಾಲಯದ ಹೈ–ಟೆಕ್ ವಿಭಾಗದಲ್ಲಿ ೨೦೨೦–೨೧ನೇ ಸಾಲಿನಲ್ಲಿ ಎಷ್ಟು ಮಾದರಿಗಳು ಸ್ವೀಕೃತವಾಗಿರುತ್ತದೆ ಹಾಗೂ ಎಷ್ಟು ಮಾದರಿಗಳು ವಿಶ್ಲೇಷಣೆಗೆ ಒಳಪಟ್ಟು ವರದಿಯನ್ನು ನೀಡಲಾಗಿರುತ್ತದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಶೆಡ್ಯೂಲ್ C & C1 of Drugs & Cosmetic Act, 1940 ಎಂದರೇನು ; ಔಷಧ ನಿಯಂತ್ರಣ ಇಲಾಖೆಯಿಂದ ಯಾವ ಔಷಧ ಕಂಪನಿಗಳಿಗೆ ಕರ್ನಾಟಕ ರಾಜ್ಯದಲ್ಲಿ ಮಾನ್ಯತೆ ನೀಡಲಾಗಿದೆ ; (ವಿವರಗಳನ್ನು ನೀಡುವುದು)

(ಉ) ಔಷಧ ನಿಯಂತ್ರಣ ಇಲಾಖೆಯಲ್ಲಿ ಎಷ್ಟು Drug Inspector ಗಳನ್ನು ನೇಮಕಾತಿ ಮಾಡಿಕೊಳ್ಳಲಾಗಿದೆ ; ಇದರಲ್ಲಿ C & C1 ತರಬೇತಿ ಪಡೆದಿರುವ Drug Inspector ಗಳ ಸಂಖ್ಯೆ ಎಷ್ಟು ? (ಮಾಹಿತಿ ನೀಡುವುದು)

## ಸರ್ಕಾರಿ ಮತ್ತು ಅನುದಾನಿತ ಪದವಿ ಪೂರ್ವ ಕಾಲೇಜಿನ ಸಹ ಪ್ರಾಧ್ಯಾಪಕರಿಗೆ ಪದೋನ್ನತಿ ನೀಡದಿರುವ ಬಗ್ಗೆ

**ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೨೦೧೦ (೨೩೫೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ಮತ್ತು ಅನುದಾನಿತ ಪದವಿ ಪೂರ್ವ ಕಾಲೇಜಿನ ಸಹ ಪ್ರಾಧ್ಯಾಪಕರಿಗೆ ಕಳೆದ ೧೫ ವರ್ಷಗಳಿಂದ ಪ್ರಾಧ್ಯಾಪಕರಾಗಿ ಪದೋನ್ನತಿ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ೪೩೧ ಸರ್ಕಾರಿ ಪದವಿ ಕಾಲೇಜುಗಳ ಪೈಕಿ ಚಿತ್ರದುರ್ಗದ ಸರ್ಕಾರಿ ಕಲಾ ಕಾಲೇಜು ಹೊರತುಪಡಿಸಿದರೆ, ೪೩೦ ಕಾಲೇಜುಗಳಲ್ಲಿ ಖಾಯಂ ಪ್ರಾಂಶುಪಾಲರು ಇಲ್ಲದೆ, ಕಳೆದ ೧೩ ವರ್ಷಗಳಿಂದ ಪ್ರಾಂಶುಪಾಲರ ಹುದ್ದೆಯನ್ನು ಭರ್ತಿ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ; (ಮಾಹಿತಿ ನೀಡುವುದು)

(ಇ) ೨೦೦೬ರ ೬ನೇ ಮತ್ತು ೨೦೧೬ರ ೭ನೇ ಯು.ಜಿ.ಸಿ ಹಿಂಬಾಕಿ ಇನ್ನೂ ಪಾವತಿಯಾಗಿರುವುದಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಬಾಕಿಯನ್ನು ಪಾವತಿಸಲಾಗುವುದು ? (ಮಾಹಿತಿ ನೀಡುವುದು)

## ಬೆಂಗಳೂರು ನಗರ ಜಿಲ್ಲೆಯಲ್ಲಿ ಕೋವಿಡ್ ಲಸಿಕೆ ನೀಡುವ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೦೧೧ (೨೩೭೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರ ಜಿಲ್ಲೆಯಲ್ಲಿ ಕೋವಿಡ್–೧೯ ರಿಂದ ಎಷ್ಟು ಜನ ಸಾವಿಗೀಡಾಗಿದ್ದಾರೆ ;

(ಆ) ಇದುವರೆಗೂ ಮೊದಲನೇ ಹಂತದಲ್ಲಿ ಎಷ್ಟು ಜನಕ್ಕೆ ಕೋವಿಡ್ ಲಸಿಕೆಯನ್ನು ನೀಡಲಾಗಿದೆ ; ಎರಡನೇ ಹಂತದಲ್ಲಿ ಸರ್ಕಾರ ಎಷ್ಟು ಜನಕ್ಕೆ ಕೋವಿಡ್ ಲಸಿಕೆ ನೀಡಲು ಯೋಜನೆ ರೂಪಿಸಿಕೊಂಡಿದೆ ;

(ಇ) ಸರ್ಕಾರ ಪೂರ್ಣ ಪ್ರಮಾಣದಲ್ಲಿ ಕೋವಿಡ್ ಲಸಿಕೆ ನೀಡಲು ಎಷ್ಟು ಕಾಲಮಿತಿ ತೆಗೆದುಕೊಳ್ಳಲಾಗುವುದು ;

(ಈ) ಕೋವಿಡ್ ಲಸಿಕೆಯನ್ನು ಖಾಸಗಿ ಔಷಧಿ ಮಳಿಗೆಗಳಲ್ಲಿ ಮಾರಾಟಕ್ಕೆ ಸರ್ಕಾರ ಅನುಮತಿ ನೀಡಲಾಗಿದೆಯೇ ; ಹಾಗಿದ್ದಲ್ಲಿ, ಸರ್ಕಾರ ನಿಗಧಿಪಡಿಸಿರುವ ದರ ಎಷ್ಟು ;

(ಉ) ಬೆಂಗಳೂರು ನಗರ ಜಿಲ್ಲೆಯಲ್ಲಿ ಎಷ್ಟು ಕೋವಿಡ್ ಲಸಿಕೆ ಕೇಂದ್ರಗಳಿವೆ ; ಪ್ರಸ್ತುತ ಬೆಂಗಳೂರು ನಗರದಲ್ಲಿ ಎಷ್ಟು ಸರ್ಕಾರಿ ಆಸ್ಪತ್ರೆಗಳಲ್ಲಿ ಕೋವಿಡ್ ಚಿಕಿತ್ಸೆ ನೀಡಲಾಗುತ್ತಿದೆ ? (ಸೂಕ್ತ ಮಾಹಿತಿ ನೀಡುವುದು)

## ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ನೀಡಲಾಗಿರುವ ಅನುದಾನದ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೦೧೨ (೨೩೭೯) ಮಾನ್ಯ ಅರಣ್ಯ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಗೆ ಸಾಂಸ್ಕೃತಿಕ ಸಂಘ ಸಂಸ್ಥೆಗಳಿಗೆ, ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ನೀಡಲಾಗಿರುವ ಅನುದಾನವೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದ ಸಾಂಸ್ಕೃತಿಕ ಇಲಾಖೆ ವತಿಯಿಂದ ಕಳುಹಿಸಲಾಗುತ್ತಿರುವ ಸಾಂಸ್ಕೃತಿಕ ಕಲಾತಂಡಗಳು ಯಾವುವು ; ಕಲಾ ತಂಡಗಳಿಗೆ ನೀಡಲಾಗುತ್ತಿರುವ ಗೌರವಧನ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಕಳೆದ ಮೂರು ವರ್ಷಗಳಲ್ಲಿ ಹೊರ ರಾಜ್ಯ/ ಹೊರ ರಾಷ್ಟ್ರಗಳಲ್ಲಿ ಸಾಂಸ್ಕೃತಿಕ ಸಮಾರಂಭಗಳನ್ನು ಉತ್ತೇಜಿಸಲು ಸರ್ಕಾರ ಕೈಗೊಂಡ ಕಾರ್ಯಕ್ರಮಗಳು ಯಾವುವು ? (ಜಿಲ್ಲಾವಾರು ಮಾಹಿತಿ ನೀಡುವುದು)

# ಅನುದಾನಿತ ಪ್ರೌಢ ಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿನ ಖಾಲಿ ಹುದ್ದೆ ತುಂಬಲು ಅನುಮತಿ ನೀಡುವ ಬಗ್ಗೆ

**ಶ್ರೀ ಪುಟ್ಟಣ್ಣ (ಶಿಕ್ಷಕರ ಕ್ಷೇತ್ರ) :-**

೨೦೧೩ (೨೩೬೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಅನುದಾನಿತ ಪ್ರೌಢಶಾಲಾ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ನಿವೃತ್ತಿ, ಮರಣ, ರಾಜೀನಾಮೆಯಿಂದ ಡಿಸೆಂಬರ್ ೨೦೧೫ ರವರೆಗೆ ಖಾಲಿ ಆಗಿರುವ ಹುದ್ದೆಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಆ) ಸದರಿ ಅವಧಿಯ ಖಾಲಿ ಇರುವ ಎಲ್ಲಾ ಹುದ್ದೆಗಳಿಗೂ ಅನುಮತಿ ನೀಡದೆ ಕೆಲವೇ ಹುದ್ದೆಗಳನ್ನು ಅನುಮೋದನೆ ಮಾಡಲು ಆದೇಶ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಡಿಸೆಂಬರ್ ೨೦೧೫ ರವರೆಗೆ ನಿವೃತ್ತಿ, ಮರಣ, ರಾಜೀನಾಮೆಯಿಂದ ಖಾಲಿ ಆಗಿರುವ, ಖಾಲಿ ಇರುವ ಎಲ್ಲಾ ಹುದ್ದೆಗಳನ್ನು ತುಂಬಲು ಯಾವ ಕಾಲಮಿತಿಯಲ್ಲಿ ಅನುಮತಿ ನೀಡಲಾಗುತ್ತದೆ ;

(ಈ) ಜನವರಿ ೨೦೧೬ ರಿಂದ ೨೦೨೦ರ ಡಿಸೆಂಬರ್‌ವರೆಗೆ ನಿವೃತ್ತಿ, ಮರಣ, ರಾಜೀನಾಮೆಯಿಂದ ಖಾಲಿ ಆಗಿರುವ ಹುದ್ದೆಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಉ) ಸದರಿ ಖಾಲಿ ಹುದ್ದೆಗಳನ್ನು ತುಂಬಲು ಯಾವ ಕಾಲಮಿತಿಯಲ್ಲಿ ಅನುಮತಿ ನೀಡಲಾಗುತ್ತದೆ ?

## ಕೋವಿಡ್-೧೯ ಸಾಂಕ್ರಾಮಿಕ ರೋಗಕ್ಕೆ ನೀಡಲಾಗುತ್ತಿರುವ ಲಸಿಕೆಯ ವೆಚ್ಚದ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೦೧೪ (೨೩೪೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೋವಿಡ್-೧೯ ಸಾಂಕ್ರಾಮಿಕ ರೋಗಕ್ಕೆ ನೀಡಲಾಗುತ್ತಿರುವ ಲಸಿಕೆಗಾಗಿ ಈವರೆಗೆ ಸರ್ಕಾರದ ವತಿಯಿಂದ ಮಾಡಲಾಗಿರುವ ವೆಚ್ಚವೆಷ್ಟು ; ಈ ಲಸಿಕೆಯ ಅವಧಿ ಮೀರುವ (expiry) ಸಮಯ ಎಷ್ಟು ; ಇಲ್ಲಿಯವರೆಗೆ ಉಪಯೋಗಿಸದೇ ಅವುಗಳ ಅವಧಿ ಮೀರಿದ ಕಾರಣಕ್ಕೆ ನಾಶಪಡಿಸಿದ ಲಸಿಕೆಗಳ ಸಂಖ್ಯೆ ಎಷ್ಟು; ನಷ್ಟದ ಒಟ್ಟು ಮೊತ್ತವೆಷ್ಟು ;

(ಆ) ಅತೀ ಕಡಿಮೆ ಬಾಳಿಕೆ ಅವಧಿಯನ್ನು (expiry) ಹೊಂದಿರುವ ಲಸಿಕೆಯನ್ನು ಕಾಲಮಿತಿಯಲ್ಲಿ ಸಮುದಾಯಕ್ಕೆ ನೀಡುವ ನಿಟ್ಟಿನಲ್ಲಿ ಸರ್ಕಾರ ಹಾಕಿಕೊಂಡಿರುವ ಯೋಜನೆ ಹಾಗೂ ಸಿದ್ಧತೆಗಳಾವುವು ;

(ಇ) ಖಾಸಗಿ ಆಸ್ಪತ್ರೆಗಳಲ್ಲಿ ಲಸಿಕೆ ನೀಡುವ ಯೋಜನೆ ಇದೆಯೇ ; ಇದ್ದಲ್ಲಿ, ಎಷ್ಟು ದರವನ್ನು ನಿಗದಿಪಡಿಸಲಾಗುವುದು ; ೨೪x ೭ ಲಸಿಕೆ ನೀಡುವ ಯೋಜನೆ ಸರ್ಕಾರಕ್ಕಿದೆಯೇ ; ಇಲ್ಲವಾದಲ್ಲಿ, ಕಾರಣವೇನು ; ಯಾವಾಗ ಪ್ರಾರಂಭಿಸಲಾಗುವುದು ?

## ರಾಜ್ಯದಲ್ಲಿ ಕೋವಿಡ್-೧೯ ನಂತರದ ದಿನಗಳಲ್ಲಿ ಶಾಲಾ ಪುನರಾರಂಭದ ಗೊಂದಲದ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೦೧೫ (೨೩೪೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೋವಿಡ್-೧೯ ನಂತರದ ದಿನಗಳಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ ವತಿಯಿಂದ ಶಾಲಾ ಪುನರಾರಂಭ ಸೇರಿದಂತೆ ಇತರೇ ವಿಚಾರಗಳಿಗೆ ಸಂಬಂಧಿಸಿದಂತೆ ಯಾವ ಯಾವ ಸುತ್ತೋಲೆ/ ಮಾರ್ಗಸೂಚಿಗಳನ್ನು ಹೊರಡಿಸಲಾಗಿದೆ ; (ಸುತ್ತೋಲೆ ಪ್ರತಿ ಒದಗಿಸುವುದು)

(ಆ) ಒಂದು ವರ್ಷದಲ್ಲಿ ಯಾವ ಯಾವ ತರಗತಿಗಳನ್ನು ಪ್ರಾರಂಭಿಸಲಾಗಿದೆ ; ಉಳಿದ ತರಗತಿಗಳನ್ನು ಯಾವಾಗ ಪ್ರಾರಂಭಿಸಲಾಗುವುದು ; ಪ್ರಾರಂಭಿಸದೇ ಇರಲು ಕಾರಣವೇನು ;

(ಇ) ಶಿಕ್ಷಣ ಇಲಾಖೆಯ ಗೊಂದಲದ ನೀತಿಯಿಂದಾಗಿ ವಿದ್ಯಾರ್ಥಿಗಳು/ ಪೋಷಕರು/ವಿದ್ಯಾಸಂಸ್ಥೆಗಳು/ಶಿಕ್ಷಕರು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಗೊಂದಲ ಪರಿಹರಿಸುವ ನಿಟ್ಟಿನಲ್ಲಿ ಸರ್ಕಾರ ತೆಗೆದುಕೊಳ್ಳುವ ಕಟ್ಟುನಿಟ್ಟಿನ ಕ್ರಮಗಳಾವುವು ?

## ಕೋವಿಡ್-೧೯ ಸಾಂಕ್ರಾಮಿಕ ರೋಗಕ್ಕೆ ನೀಡಲಾಗುತ್ತಿರುವ ಲಸಿಕೆ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೦೧೬ (೨೩೪೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೋವಿಡ್-೧೯ ಸಾಂಕ್ರಾಮಿಕ ರೋಗಕ್ಕೆ ನೀಡಲಾಗುತ್ತಿರುವ ಲಸಿಕೆ ಯಾವುದು ; ಅದರ ಪರಿಣಾಮಕಾರತ್ವ ಗುಣಮಟ್ಟವನ್ನು ಪರಿಶೀಲಿಸಿ ದೃಢೀಕರಿಸಿರುವ ಸಂಸ್ಥೆ ಯಾವುದು ; ಲಸಿಕೆ ಎಷ್ಟರಮಟ್ಟಿಗೆ ಪರಿಣಾಮಕಾರಿಯಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಸಮುದಾಯಕ್ಕೆ ಯಾವ ಯಾವ ಹಂತದಲ್ಲಿ ಯಾವ ಕಾಲಮಿತಿಯಲ್ಲಿ ನೀಡಲಾಗುವುದು; ಇದಕ್ಕಾಗಿ ಇಲಾಖೆ ಮಾಡಿಕೊಂಡಿರುವ ಯೋಜನೆ ಹಾಗೂ ಸಿದ್ದತೆಗಳಾವುವು ;

(ಇ) ಈಗಾಗಲೇ ಶಾಲಾ ಕಾಲೇಜುಗಳು ಪ್ರಾರಂಭವಾಗಿದ್ದು, ಶಿಕ್ಷಕರಿಗೆ ಲಸಿಕೆ ನೀಡಲಾಗಿದೆಯೇ ; ನೀಡದಿದ್ದಲ್ಲಿ, ಕಾರಣವೇನು ; ಯಾವಾಗ ನೀಡಲಾಗುವುದು ?

## ರಾಜ್ಯದ ಪ್ರವಾಸೋದ್ಯಮ ಕೇಂದ್ರಗಳ ಅಭಿವೃದ್ಧಿ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೧೧೭ (೨೩೫೦) ಮಾನ್ಯ ಪ್ರವಾಸೋದ್ಯಮ ಮತ್ತು ಪರಿಸರ ಮತ್ತು ಜೀವಿಪರಿಸ್ಥಿತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಅತ್ಯುತ್ತಮ ೧೦ ಪ್ರವಾಸೋದ್ಯಮ ಕೇಂದ್ರಗಳು ಯಾವುವು ; ೧ ರಿಂದ ೧೦ರ ಕ್ರಮಾಂಕ (top ten) ದಲ್ಲಿ ನೀಡುವುದು ; ಪ್ರತಿ ಜಿಲ್ಲೆಯ ಅತ್ಯುತ್ತಮ ೧೦ ಪ್ರವಾಸೋದ್ಯಮ ಕೇಂದ್ರಗಳು ಯಾವುವು ; (ಜಿಲ್ಲಾವಾರು ೧ ರಿಂದ ೧೦ರ ಕ್ರಮಾಂಕ (top ten) ದಲ್ಲಿ ನೀಡುವುದು)

(ಆ) ಅವುಗಳ ಅಭಿವೃದ್ಧಿಗಾಗಿ ಸರ್ಕಾರ ಬಿಡುಗಡೆ ಮಾಡಿರುವ ಅನುದಾನವೆಷ್ಟು ; ವೆಚ್ಚವೆಷ್ಟು ;

(ಇ) ನೂತನವಾಗಿ ಆಯ್ಕೆಯಾಗಿರುವ ಪ್ರವಾಸೋದ್ಯಮ ಸಚಿವರು ಎಷ್ಟು ಪ್ರವಾಸೋದ್ಯಮ ಕೇಂದ್ರಗಳಿಗೆ ಭೇಟಿ ನೀಡಿದ್ದಾರೆ ;

(ಈ) ಕೇರಳ, ಗೋವಾ ರಾಜ್ಯಗಳ ರೀತಿಯಲ್ಲಿ ಪ್ರವಾಸೋದ್ಯಮ ಕ್ಷೇತ್ರ ಅಭಿವೃದ್ಧಿಪಡಿಸುವ ನಿಟ್ಟಿನಲ್ಲಿ ಯಾವ ರೀತಿಯ ಚಿಂತನೆ ಹೊಂದಿದ್ದಾರೆ ? (ಕೇಂದ್ರವಾರು ದಿನಾಂಕದೊಂದಿಗೆ ಮಾಹಿತಿ ನೀಡುವುದು)

## ರಾಜ್ಯದಲ್ಲಿನ ಕಾಣೆ, ಬಾನೆ, ಕುಮ್ಕಿ, ಜುಮ್ಮಾ, ಸೊಪ್ಪಿನಬೆಟ್ಟದ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೦೧೮ (೨೩೪೬) ಮಾನ್ಯ ಅರಣ್ಯ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಾಣೆ, ಬಾನೆ, ಕುಮ್ಕಿ, ಜುಮ್ಮಾ, ಸೊಪ್ಪಿನಬೆಟ್ಟವನ್ನು ಕಂದಾಯ ಭೂಮಿಯೆಂದು ಪರಿಗಣಿಸಲಾಗುತ್ತಿದೆಯೇ ಅಥವಾ ಅರಣ್ಯ ಭೂಮಿಯೆಂದು ಪರಿಗಣಿಸಲಾಗುತ್ತಿದೆಯೇ ;

(ಆ) ಕಾಣೆ, ಬಾನೆ, ಕುಮ್ಕಿ, ಜುಮ್ಮಾ, ಸೊಪ್ಪಿನಬೆಟ್ಟಗಳ ವ್ಯಾಖ್ಯೆ, ವ್ಯಾಪ್ತಿ, ಉದ್ದೇಶಗಳು, ಉಪಯೋಗಗಳು ಯಾವುವು ; (ಮಾರ್ಗಸೂಚಿ/ ಸುತ್ತೋಲೆ ಪ್ರತಿ ಒದಗಿಸುವುದು)

(ಇ) ರಾಜ್ಯದಲ್ಲಿರುವ ಕಾಣೆ, ಬಾನೆ, ಕುಮ್ಕಿ, ಜುಮ್ಮಾ, ಸೊಪ್ಪಿನಬೆಟ್ಟ ಭೂಮಿಗಳ ಒಟ್ಟು ವಿಸ್ತೀರ್ಣವೆಷ್ಟು ? (ಜಿಲ್ಲಾವಾರು, ತಾಲ್ಲೂಕುವಾರು, ಭೂಮಿಯ ವರ್ಗವಾರು ವಿವರ ನೀಡುವುದು)

## ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯಿಂದ ನಿರುದ್ಯೋಗಿಗಳಿಗೆ ಉದ್ಯೋಗ ಕಲ್ಪಿಸುವ ಕುರಿತು

**ಶ್ರೀ ಹೆಚ್.ಎಂ. ರಮೇಶ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೦೧೯ (೨೩೩೩) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯಿಂದ ನಿರುದ್ಯೋಗಿಗಳಿಗೆ ಉದ್ಯೋಗ ಕಲ್ಪಿಸಲು ರೂಪಿಸಿರುವ ಯೋಜನೆಗಳು ಯಾವುವು ; ಈ ಯೋಜನೆಗಳ ಪ್ರಯೋಜನ ಪಡೆಯಲು ನಿಗದಿಪಡಿಸಿರುವ ಮಾನದಂಡಗಳೇನು ; (ವಿವರ ನೀಡುವುದು)

(ಆ) ರಾಜ್ಯದ ಯಾವ ಯಾವ ಜಿಲ್ಲಾ ಕೇಂದ್ರಗಳಲ್ಲಿ ಕೌಶಲ್ಯಾಭಿವೃದ್ಧಿ ಕೇಂದ್ರಗಳನ್ನು ತೆರೆಯಲಾಗಿದೆ ; ಈ ಕೇಂದ್ರಗಳ ಮುಖ್ಯ ಉದ್ದೇಶ ಮತ್ತು ಕಾರ್ಯ ಚಟುವಟಿಕೆಗಳೇನು ; (ವಿವರ ನೀಡುವುದು)

(ಇ) ಈ ಇಲಾಖೆಯಿಂದ ರಾಜ್ಯದಲ್ಲಿ ಕಳೆದ ೨ ವರ್ಷಗಳಲ್ಲಿ ಕೈಗೊಂಡಿರುವ ಕಾರ್ಯಚಟುವಟಿಕೆಗಳೇನು ? (ಸಂಪೂರ್ಣ ವಿವರ ನೀಡುವುದು)

## ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ ಕುರಿತು

**ಶ್ರೀ ಹೆಚ್.ಎಂ. ರಮೇಶ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೦೨೦ (೨೩೩೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ (ಆರ್.ಎಂ.ಎಸ್.,) ಯೋಜನೆಯಡಿ ಹೊಸ ಶಾಲಾ ಕೊಠಡಿಗಳ ನಿರ್ಮಾಣ ಕಾಮಗಾರಿಗಳು ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಸದರಿ ಯೋಜನೆಯನ್ನು ಮುಂದುವರೆಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಆ) ಸದರಿ ಯೋಜನೆಯಡಿ ಸ್ಥಗಿತಗೊಂಡಿರುವ ಹೊಸ ಶಾಲಾ ಕೊಠಡಿಗಳ ನಿರ್ಮಾಣ ಕಾಮಗಾರಿಗಳು ಯಾವುವು ;

(ಇ) ಈ ಕಾಮಗಾರಿಗಳನ್ನು ಮುಂದುವರೆಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಸಂಪೂರ್ಣ ವಿವರ ನೀಡುವುದು)

# ಅರಣ್ಯ ಇಲಾಖೆಯಲ್ಲಿ ಸಾರ್ವಜನಿಕ ಉದ್ಯೋಗ ನೇಮಕಾತಿಯ ಮೀಸಲಾತಿ ಕುರಿತು

**ಶ್ರೀ ಹೆಚ್.ಎಂ. ರಮೇಶ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೦೨೧ (೨೩೩೦) ಮಾನ್ಯ ಅರಣ್ಯ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅರಣ್ಯ ಇಲಾಖೆಯಲ್ಲಿ ಸಾರ್ವಜನಿಕ ಉದ್ಯೋಗ (ಹೈದರಾಬಾದ್-ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ಆದೇಶ-೨೦೧೩ರಂತೆ ವಿವಿಧ ವೃಂದದಲ್ಲಿ ಗುರುತಿಸಿರುವ ಹುದ್ದೆಗಳು ಯಾವುವು ; (ವಿವರ ಮತ್ತು ಸಂಬಂಧಿಸಿದ ಅಧಿಸೂಚನೆ ಆದೇಶವನ್ನು ನೀಡುವುದು)

(ಆ) ಅರಣ್ಯ ರಕ್ಷಕ, ಉಪವಲಯ ಅರಣ್ಯ ಅಧಿಕಾರಿ ಮತ್ತು ವಲಯ ಅರಣ್ಯ ಅಧಿಕಾರಿ ಹುದ್ದೆಗೆ ಹೈದರಾಬಾದ್-ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ ನೀಡಲು ಹುದ್ದೆಗಳನ್ನು ಗುರುತಿಸಲಾಗಿದೆಯೇ ; (ಮೀಸಲಾತಿ ಕೋರಿದ ನೌಕರರ ಸಂಖ್ಯೆ ಮತ್ತು ಮೀಸಲಾತಿಯನ್ನು ಪಡೆದ ನೌಕರರ ವಿವರವನ್ನು ನೀಡುವುದು)

(ಇ) ಹೈದರಾಬಾದ್-ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿಯಡಿ ದಿನಾಂಕ: ೦೧.೦೧.೨೦೧೪ರಿಂದ ಈ ದಿನಾಂಕದವರೆಗೆ ಅರಣ್ಯ ರಕ್ಷಕ, ಉಪವಲಯ ಅರಣ್ಯ ಅಧಿಕಾರಿ ಮತ್ತು ವಲಯ ಅರಣ್ಯ ಅಧಿಕಾರಿ ಹುದ್ದೆಗೆ ನೇಮಕಾತಿ ಹೊಂದಿದ ಅಭ್ಯರ್ಥಿಗಳ ಸಂಖ್ಯೆ ಎಷ್ಟು ; (ನೇಮಕಾತಿ ಅಧಿಸೂಚನೆ ಮತ್ತು ಆಯ್ಕೆ ಪಟ್ಟಿಯನ್ನು ನೀಡುವುದು)

(ಈ) ಮೀಸಲಾತಿಯಡಿ ದಿನಾಂಕ: ೦೧.೦೧.೨೦೧೪ರಿಂದ ಈ ದಿನಾಂಕದವರೆಗೆ ಅರಣ್ಯ ರಕ್ಷಕ, ಉಪವಲಯ ಅರಣ್ಯ ಅಧಿಕಾರಿ ಮತ್ತು ವಲಯ ಅರಣ್ಯ ಅಧಿಕಾರಿ ಹುದ್ದೆ ಹಾಗೂ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಹುದ್ದೆಗೆ ಮುಂಬಡ್ತಿ ಪಡೆದಿರುವ ನೌಕರರ ಸಂಖ್ಯೆ ಎಷ್ಟು ; (ಆದೇಶದ ಪ್ರತಿಯನ್ನು ನೀಡುವುದು)

(ಉ) ಹೈದರಾಬಾದ್-ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿಯಡಿ ದಿನಾಂಕ : ૩೧.೧೨.೨೦೨೦ರಂದು ಕರ್ತವ್ಯ ನಿರ್ವಹಿಸುತ್ತಿರುವ ಅರಣ್ಯ ರಕ್ಷಕ, ಉಪವಲಯ ಅರಣ್ಯ ಅಧಿಕಾರಿ ಮತ್ತು ವಲಯ ಅರಣ್ಯ ಅಧಿಕಾರಿ ಹುದ್ದೆ ಹಾಗೂ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿ/ನೌಕರರು ಯಾರು ? (ಪೂರ್ಣ ಮಾಹಿತಿ/ನೇರ/ಸ್ಥಾನಪನ್ನ ಮುಂಬಡ್ತಿ/ಪ್ರಭಾರ ಮೀಸಲಾತಿ/ಸಾಮಾನ್ಯ, ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವ ಹುದ್ದೆಯ ವಿವರ ನೀಡುವುದು)

## ನಾಡಪ್ರಭು ಕೆಂಪೇಗೌಡರು ಕಟ್ಟಿದ ಹುತ್ರಿದುರ್ಗವು ಅಭಿವೃದ್ಧಿ ಕಾಣದೇ ಇರುವ ಕುರಿತು

**ಶ್ರೀ ಹೆಚ್.ಎಂ. ರಮೇಶ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೦೨೨ (೨೩೩೨) ಮಾನ್ಯ ಪ್ರವಾಸೋದ್ಯಮ ಮತ್ತು ಪರಿಸರ ಮತ್ತು ಜೀವಿಪರಿಸ್ಥಿತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ನಾಡಪ್ರಭು ಕೆಂಪೇಗೌಡರು ಕಟ್ಟಿದ ನವದುರ್ಗಗಳಲ್ಲಿ ಒಂದಾದ "ಹುತ್ರಿದುರ್ಗವು" ಅಭಿವೃದ್ಧಿ ಕಾಣದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಹಾಗೂ ಪ್ರವಾಸೋದ್ಯಮ ಇಲಾಖೆ ಕೈಗೊಂಡ ಕಾರ್ಯಕ್ರಮಗಳೇನು ;

(ಆ) ಹುತ್ರಿದುರ್ಗದ ಅಭಿವೃದ್ಧಿಗೆ ಕಳೆದ ಮೂರು ವರ್ಷಗಳಲ್ಲಿ ಬಿಡುಗಡೆಯಾದ ಅನುದಾನವೆಷ್ಟು ; ಖರ್ಚಾದ ಅನುದಾನವೆಷ್ಟು; (ಸಂಪೂರ್ಣ ವಿವರ ನೀಡುವುದು)

(ಇ) ಹುತ್ರಿದುರ್ಗ ಗ್ರಾಮವನ್ನು ಅಭಿವೃದ್ಧಿಪಡಿಸಿ ಪ್ರವಾಸೋದ್ಯಮವನ್ನು ಉತ್ತೇಜಿಸಲು ಹೊಸ ಹೊಸ ಯೋಜನೆಗಳನ್ನು ರೂಪಿಸುವಲ್ಲಿ ಸರ್ಕಾರದ ನಿಲುವೇನು ? (ಸಂಪೂರ್ಣ ವಿವರ ನೀಡುವುದು)

**ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ಡಿ.ಡಿ. ನೀಡುವ ಕುರಿತು.**

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೦೨೩ (೨೩೧೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೦–೨೧ರ ಶೈಕ್ಷಣಿಕ ಸಾಲಿನಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ವಿದ್ಯಾರ್ಥಿಗಳು ಬ್ಯಾಂಕ್‌ಗಳ ಮೂಲಕ ಶುಲ್ಕ ಪಾವತಿಸಿದ್ದರೂ ಶುಲ್ಕ ಪ್ರಾಧಿಕಾರಕ್ಕೆ ಬಂದಿಲ್ಲ ಎಂಬ ಕಾರಣಕ್ಕೆ ಎಷ್ಟು ವಿದ್ಯಾರ್ಥಿಗಳಿಗೆ ತಾಂತ್ರಿಕ ಶಿಕ್ಷಣ ಮತ್ತು ವೈದ್ಯಕೀಯ ಶಿಕ್ಷಣದ ಕೌನ್ಸಿಲಿಂಗ್‌ಗೆ ಹಾಜರಾಗಲು ಅವಕಾಶ ನಿರಾಕರಿಸಲಾಗಿದೆ ; (ವಿವರ ನೀಡುವುದು)

(ಆ) ಬ್ಯಾಂಕಿನ ಮೂಲಕ ಶುಲ್ಕ ಪಾವತಿಸಿದ ದಾಖಲೆಗಳನ್ನು ನೀಡಿದ ಬಳಿಕವು ಎಷ್ಟು ವಿದ್ಯಾರ್ಥಿಗಳಿಗೆ ವೈದ್ಯಕೀಯ ಕಾಲೇಜಿಗೆ ಪ್ರವೇಶಾತಿ ಪಡೆಯಲು ಸಾಧ್ಯವಾಗಿಲ್ಲ ; (ಹೆಸರಿನೊಂದಿಗೆ ಮಾಹಿತಿ ನೀಡುವುದು)

(ಇ) ಬ್ಯಾಂಕು ಅಥವಾ ಕೆ.ಇ.ಎ. ಯಿಂದ ಆದ ತಪ್ಪಿಗೆ ಶುಲ್ಕ ಪಾವತಿಸಿರುವ ವಿದ್ಯಾರ್ಥಿಗಳಿಗೆ ವೈದ್ಯಕೀಯ ಕಾಲೇಜಿಗೆ ಸೇರಲು ಅನಾನುಕೂಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು ?

## ಜೀತದಾಳುಗಳ ಪುನರ್ವಸತಿ ಕಾರ್ಯಕ್ರಮದ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೨೦೨೪ (೨೩೨೧) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ಜೀತದಾಳುಗಳ ಪುನರ್ವಸತಿಗಾಗಿ ಯಾವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ಎಷ್ಟು ಜೀತದಾಳುಗಳನ್ನು ಪುನರ್ವಸತಿಗೊಳಿಸಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿರುವ ಪ್ರಸ್ತುತ ಜೀತದಾಳುಗಳ ಪುನರ್ವಸತಿ ಕೇಂದ್ರಗಳು ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು) ಸದರಿ ಪುನರ್ವಸತಿ ಕೇಂದ್ರಗಳಲ್ಲಿ ಎಷ್ಟು ಜೀತದಾಳುಗಳು ವಾಸ್ತವ್ಯ ಹೊಂದಿದ್ದಾರೆ ?

## ಆದಾಯ ತೆರಿಗೆ ಇಲಾಖೆಯ ನೋಟೀಸ್ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೨೦೨೫ (೨೩೨೦) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಗೆ ಆದಾಯ ತೆರಿಗೆ ಇಲಾಖೆಯಿಂದ ೪೧೩.೦೮ ಕೋಟಿ ತೆರಿಗೆ ಬಾಕಿ ಬಗ್ಗೆ ನೋಟೀಸ್ ಸ್ವೀಕರಿಸಿದ ದಿನಾಂಕ ಯಾವುದು; ಸದರಿ ನೋಟೀಸನ್ನು ಸ್ವೀಕರಿಸಿದವರು ಯಾರು; ಸಂಬಂಧಿತ ಕಾರ್ಯನಿರ್ವಾಹಕರಿಗೆ ಈ ನೋಟೀಸನ್ನು ಯಾವ ದಿನಾಂಕದಂದು ನೀಡಲಾಗಿದೆ;

(ಆ) ಆದಾಯ ತೆರಿಗೆ ಇಲಾಖೆಯಿಂದ ೪೧೩.೦೮ ಕೋಟಿ ತೆರಿಗೆ ಬಾಕಿ ಇದೆ ಎಂಬ ನೋಟೀಸ್ ಬಂದಿರುವ ವಿಷಯವನ್ನು ಕಛೇರಿಯ ಮುಖ್ಯಸ್ಥರ ಗಮನಕ್ಕೆ ಯಾವ ದಿನಾಂಕದಂದು ತರಲಾಗಿದೆ;

(ಇ) ಕಛೇರಿ ಮುಖ್ಯಸ್ಥರು ಆದಾಯ ತೆರಿಗೆ ಇಲಾಖೆಯಿಂದ ೪೧೩.೦೮ ಕೋಟಿ ತೆರಿಗೆ ಬಾಕಿ ಇದೆ ಎಂಬ ನೋಟೀಸ್ ಕುರಿತು ಕ್ರಮ ಕೈಗೊಳ್ಳಲು ಯಾವ ದಿನಾಂಕದಂದು ತಿಳಿಸಿರುತ್ತಾರೆ ?

## ಆಸ್ಪತ್ರೆ ಪ್ರಾರಂಭಿಸಲು ಇರಬೇಕಾದ ಸೌಕರ್ಯಗಳ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೨೦೨೬ (೨೩೨೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಆಸ್ಪತ್ರೆಯನ್ನು ಪ್ರಾರಂಭಿಸಲು ಹೊಂದಿರಬೇಕಾದ ಕನಿಷ್ಠ ಮೂಲ ಸೌಕರ್ಯಗಳಾವುವು ;

(ಆ) ಸರ್ಕಾರದ ಯಾವ ಯಾವ ಇಲಾಖೆಯಿಂದ ಆಸ್ಪತ್ರೆಯನ್ನು ಪ್ರಾರಂಭಿಸಲು ಅನುಮತಿಯನ್ನು ಪಡೆಯಬೇಕಾಗಿದೆ ;

(ಇ) ಆಸ್ಪತ್ರೆಯನ್ನು ಸರ್ಕಾರದ ವ್ಯವಸ್ಥೆಯೊಳಗೆ ನೋಂದಣಿ ಮಾಡುವ ಪ್ರಕ್ರಿಯೆ ಜಾರಿಯಲ್ಲಿದೆಯೇ ; ಯಾವ ನಿಯಮಗಳ ಅಡಿಯಲ್ಲಿ ನೋಂದಣಿ ಮಾಡಬೇಕಾಗಿದೆ ; (ನಿಯಮದ ಪ್ರತಿ ನೀಡುವುದು)

(ಈ) ಕಳೆದ ೫ ವರ್ಷಗಳಲ್ಲಿ ಎಷ್ಟು ಆಸ್ಪತ್ರೆಗಳು ನೋಂದಣಿಯಾಗಿವೆ ; ಅವುಗಳು ಎಷ್ಟು ಹಾಸಿಗೆಗಳ ಆಸ್ಪತ್ರೆಯಾಗಿವೆ ? (ಹೆಸರಿನೊಂದಿಗೆ ವರ್ಷವಾರು, ಜಿಲ್ಲಾವಾರು ಮಾಹಿತಿ ನೀಡುವುದು)

## ಅರಣ್ಯ ಇಲಾಖೆಯ ಭೂಮಿಯನ್ನು ಕಂದಾಯ ಇಲಾಖೆಗೆ ನೀಡುವ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೨೦೨೭ (೨೩೧೯) ಮಾನ್ಯ ಅರಣ್ಯ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೫ ವರ್ಷಗಳಲ್ಲಿ ಅರಣ್ಯ ಇಲಾಖೆಯು ಎಷ್ಟು ಎಕರೆ ಭೂಮಿಯನ್ನು ಕಂದಾಯ ಇಲಾಖೆಗೆ ಹಸ್ತಾಂತರ ಮಾಡಲಾಗಿದೆ ; ಯಾವ ಕಾರಣಕ್ಕೆ ಈ ಅರಣ್ಯ ಭೂಮಿಯನ್ನು ಕಂದಾಯ ಇಲಾಖೆಗೆ ನೀಡಲಾಯಿತು ; (ಜಿಲ್ಲಾವಾರು ವಿವರ ನೀಡುವುದು)

(ಆ) ಕಂದಾಯ ಇಲಾಖೆಗೆ ಹಸ್ತಾಂತರ ಮಾಡಿದ ಭೂಮಿಗೆ ಪರ್ಯಾಯವಾಗಿ ಎಷ್ಟು ಎಕರೆ ಭೂಮಿಯನ್ನು ಕಂದಾಯ ಇಲಾಖೆಯಿಂದ ಅರಣ್ಯ ಇಲಾಖೆ ಪಡೆದಿದೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ಅರಣ್ಯ ಇಲಾಖೆಯ ಭೂಮಿಯು ಕಂದಾಯ ಇಲಾಖೆಗೆ ಹಸ್ತಾಂತರವಾಗಬೇಕಾದರೆ ಆ ಭೂಮಿಯ ಸ್ವರೂಪ ಹೇಗಿರಬೇಕು; ಈ ಕುರಿತು ನಿಯಮಗಳೇನು ?

## ೨೦೨೧-೨೨ರ ಶೈಕ್ಷಣಿಕ ವರ್ಷದಲ್ಲಿ ಶಾಲಾ ಮಕ್ಕಳ ಶಿಕ್ಷಣ ಕುರಿತು

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :-**

೨೦೨೮ (೨೩೮೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕೊರೋನ ಸಾಂಕ್ರಾಮಿಕ ರೋಗವು ಮತ್ತೊಮ್ಮೆ ಉಲ್ಬಣಿಸಿರುವ ಹಿನ್ನಲೆಯಲ್ಲಿ ೨೦೨೧-೨೨ರ ಶೈಕ್ಷಣಿಕ ವರ್ಷದಲ್ಲಿ ಪ್ರಾಥಮಿಕ ಶಾಲಾ ಮಕ್ಕಳ ಶಿಕ್ಷಣ ಕಲಿಕೆ ಕುರಿತು ಸರ್ಕಾರದ ನಿಲುವೇನು ; (ಸ್ಪಷ್ಟ ಪಡಿಸುವುದು)

(ಆ) ೨೦೨೧-೨೨ ನೇ ಶೈಕ್ಷಣಿಕ ವರ್ಷದಲ್ಲಿ ಖಾಸಗಿ ಶಾಲೆಗಳಲ್ಲಿ ಕಲಿಯುತ್ತಿರುವ ಮಕ್ಕಳ ಶಾಲಾ ವಾರ್ಷಿಕ ಶುಲ್ಕವನ್ನು ಕಡಿಮೆ ಮಾಡುವ ಪ್ರಸ್ತಾಪ ಸರ್ಕಾರದ ಬಳಿ ಇದೆಯೇ ; (ಮಾಹಿತಿ ನೀಡುವುದು)

(ಇ) ಕೊರೋನ ಸಾಂಕ್ರಾಮಿಕ ರೋಗದ ಹಿನ್ನಲೆಯಲ್ಲಿ ಸರ್ಕಾರದಿಂದ ಶಾಲಾ ಮಕ್ಕಳ ವಾರ್ಷಿಕ ಶುಲ್ಕವನ್ನು ಕಡಿಮೆ ಮಾಡುವಂತೆ ಸ್ಪಷ್ಟ ಮಾರ್ಗಸೂಚಿ ಹೊರಡಿಸಿದರೂ ಸಹಾ ಹಲವು ಖಾಸಗಿ ಶಾಲೆಗಳು ಆದೇಶವನ್ನು ಉಲ್ಲಂಘಿಸಿರುವ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ? (ವಿವರ ನೀಡುವುದು)

## ಪ್ರಸಕ್ತ ಸಾಲಿಗೆ ಖಾಸಗಿ ಶಾಲೆ/ಕಾಲೇಜುಗಳಲ್ಲಿ ಶುಲ್ಕ ಕಡಿತದ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೦೨೯ (೨೩೨೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಖಾಸಗಿ ಶಾಲೆ/ಕಾಲೇಜುಗಳಲ್ಲಿ ಪ್ರಸಕ್ತ ಸಾಲಿಗೆ ಕೋವಿಡ್–೧೯ರ ಹಿನ್ನೆಲೆಯಲ್ಲಿ ಶೇ.೩೦ರಷ್ಟು ಶುಲ್ಕ ಕಡಿತಗೊಳಿಸಲಾಗಿದೆಯೇ ; (ಶಾಲಾವಾರು ವಿವರ ನೀಡುವುದು)

(ಆ) ಪ್ರಸಕ್ತ ಸಾಲಿನಲ್ಲಿ ಎಲ್ಲಾ ತರಗತಿಗಳು ಪ್ರಾರಂಭವಾಗಿದೆಯೇ; ಇಲ್ಲದಿದ್ದಲ್ಲಿ ಪ್ರಾರಂಭಿಸುವ ಬಗ್ಗೆ ಯಾವ ಕ್ರಮಗಳನ್ನು ಕೈಗೊಂಡಿದೆ ;

(ಇ) ಪ್ರಸಕ್ತ ಪ್ರಾರಂಭವಾದ ತರಗತಿಗಳಲ್ಲಿ ಎಲ್ಲಾ ಮಕ್ಕಳು ಪೂರ್ಣ ಪ್ರಮಾಣದಲ್ಲಿ ಹಾಜರಾಗಿರುವರೆ ; ಹಾಜರಾಗಿಲ್ಲದಿದ್ದಲ್ಲಿ ಈ ಬಗ್ಗೆ ಯಾವ ಕ್ರಮಗಳನ್ನು ಕೈಗೊಂಡಿದೆ ?

## ಅನುದಾನಿತ ಪದವಿ ಕಾಲೇಜುಗಳಿಂದ ಬೇರ್ಪಟ್ಟ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ಬಗ್ಗೆ

**ಶ್ರೀ ಕೆ. ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೨೦೩೦ (೨೩೩೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅನುದಾನಿತ ಪದವಿ ಕಾಲೇಜುಗಳಿಂದ ಬೇರ್ಪಟ್ಟ ಪದವಿ ಪೂರ್ವ ಕಾಲೇಜುಗಳೆಷ್ಟು ; (ವಿವರ ನೀಡುವುದು)

(ಆ) ಪದವಿ ಕಾಲೇಜುಗಳಿಂದ ಬೇರ್ಪಟ್ಟ ಪದವಿ ಪೂರ್ವ ಕಾಲೇಜುಗಳಲ್ಲಿ ಕಳೆದ ೧೦–೧೫ ವರ್ಷಗಳಿಂದ ಕಾರ್ಯ ನಿರ್ವಹಿಸುತ್ತಿರುವ ಉಪನ್ಯಾಸಕರನ್ನು ಖಾಯಂಗೊಳಿಸಿ ವೇತನಾನುದಾನ ನೀಡುವ ಪ್ರಸ್ತಾವನೆ ಸರ್ಕಾರಕ್ಕಿದೆಯೇ ;

(ಇ) ಈ ಉಪನ್ಯಾಸಕರು ವಯೋಮಿತಿ ಮೀರುತ್ತಿದ್ದು, ಇವರಿಗೆ ಒಂದು ಬಾರಿ ಮೀಸಲಾತಿ ವಿನಾಯಿತಿ ನೀಡಿ ಖಾಯಂಗೊಳಿಸಿ ಅನುದಾನ ನೀಡಲು ಸರ್ಕಾರ ಕೈಗೊಂಡ ಕ್ರಮವೇನು ? (ವಿವರ ನೀಡುವುದು)

## ಸರಕಾರಿ ಪ್ರೌಢ ಶಾಲೆಗಳಲ್ಲಿ ಬೋಧಕೇತರ ಹುದ್ದೆ ಹಾಗೂ ಅತಿಥಿ ಶಿಕ್ಷಕರ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) :–**

೨೦೩೧ (೨೪೫೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ಪ್ರೌಢ ಶಾಲೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸದರಿ ಪ್ರೌಢ ಶಾಲೆಗಳಲ್ಲಿ ಮಂಜೂರಾದ ಬೋಧಕೇತರ ಹುದ್ದೆಗಳೆಷ್ಟು;

(ಇ) ಮಂಜೂರಾದ ಹುದ್ದೆಗಳಲ್ಲಿ ಪ್ರಸ್ತುತ ಎಷ್ಟು ಬೋಧಕೇತರ ನೌಕರರು ಕಾರ್ಯನಿರ್ವಹಿಸುತ್ತಿದ್ದಾರೆ; ಎಷ್ಟು ನೌಕರರು ಏಜೆನ್ಸಿ ಮೂಲಕ/ ಶಾಲಾ ಸುಧಾರಣಾ ಸಮಿತಿ ಮೂಲಕ ಕಾರ್ಯನಿರ್ವಹಿಸುತ್ತಿದ್ದಾರೆ ಮತ್ತು ಅವರಿಗೆ ನೀಡುತ್ತಿರುವ ವೇತನ ಎಷ್ಟು;

(ಈ) ಮುಂಬರುವ ಶೈಕ್ಷಣಿಕ ವರ್ಷಗಳಲ್ಲಿ ಬೋಧಕೇತರ ನೌಕರರನ್ನು ನೇಮಕ ಮಾಡಿಕೊಳ್ಳಲು ಸರಕಾರ ಚಿಂತನೆ ನಡೆಸಿದೆಯೇ ;

(ಉ) ಪ್ರೌಢ ಶಾಲೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅತಿಥಿ ಶಿಕ್ಷಕರ ಸಂಖ್ಯೆ ಎಷ್ಟು; ಪ್ರತಿ ತಿಂಗಳು ಅವರಿಗೆ ಎಷ್ಟು ವೇತನ ನೀಡಲಾಗುತ್ತಿದೆ ; ಮತ್ತು ಇದನ್ನು ಯಾವ ವರ್ಷದಿಂದ ನಿಗಧಿಪಡಿಸಲಾಗಿದೆ ?

## ಪದವಿ ಕಾಲೇಜುಗಳ ಸಹಾಯಕ ಪ್ರಾಧ್ಯಾಪಕ ಹುದ್ದೆಗಳ ಬಗ್ಗೆ

**ಶ್ರೀ ಕೆ. ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೨೦೩೨ (೨೩೨೮) ಮಾನ್ಯ ಉಪ ಮುಖ್ಯಮಂತ್ರಿಗಳು ಮತ್ತು ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಪದವಿ ಕಾಲೇಜುಗಳಲ್ಲಿ ಖಾಲಿ ಇರುವ ಸಹಾಯಕ ಪ್ರಾಧ್ಯಾಪಕರುಗಳ ಹುದ್ದೆಗಳೆಷ್ಟು; (ವಿವರ ನೀಡುವುದು)

(ಆ) ಈ ಖಾಲಿ ಇರುವ ಹುದ್ದೆಗಳನ್ನು ಯಾವ ಕಾಲಮಿತಿಯಲ್ಲಿ ಭರ್ತಿ ಮಾಡಲಾಗುವುದು ; (ವಿವರ ನೀಡುವುದು)

(ಇ) ಸಹಾಯಕ ಪ್ರಾಧ್ಯಾಪಕರ ವೃಂದ ಮತ್ತು ನೇಮಕಾತಿಗೆ ತಿದ್ದುಪಡಿ ತಂದು ಪದವಿ ಪೂರ್ವ ಕಾಲೇಜುಗಳಲ್ಲಿ U.G.C., ಅರ್ಹತೆ ಪಡೆದಿರುವ ಉಪನ್ಯಾಸಕರುಗಳಿಗೆ ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ಬಡ್ತಿ ನೀಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ? (ವಿವರ ನೀಡುವುದು)

## ಲೆಕ್ಕಾಧೀಕ್ಷಕರ ಬಡ್ತಿ ವಿಚಾರದ ಬಗ್ಗೆ .

**ಶ್ರೀ ಕೆ. ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೨೦೩೩ (೨೩೪೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಾರ್ವಜನಿಕ ಶಿಕ್ಷಣ ಇಲಾಖೆಯ ಲೆಕ್ಕಾಧೀಕ್ಷಕರುಗಳಿಗೆ ಯಾವುದೇ ಬಡ್ತಿ ಅವಕಾಶಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಇದನ್ನು ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಲೆಕ್ಕಾಧೀಕ್ಷಕರುಗಳಿಗಿಂತ ಕಡಿಮೆ ವಿದ್ಯಾರ್ಹತೆ ಹೊಂದಿರುವ ಅಧೀಕ್ಷಕರುಗಳಿಗೆ ಉಪ ನಿರ್ದೇಶಕರ ಹುದ್ದೆವರೆವಿಗೂ ಬಡ್ತಿ ಅವಕಾಶ ಕಲ್ಪಿಸಿರುವುದು ನಿಜವೇ ;

(ಈ) ಲೆಕ್ಕಾಧೀಕ್ಷಕರುಗಳಿಗಿಂತ ಕಿರಿಯರಾದ ಅಧೀಕ್ಷಕರುಗಳು ಅಧೀಕ್ಷಕರ ನಂತರದ ಎರಡು ಹುದ್ದೆಗಳಿಗೆ ಬಡ್ತಿ ಹೊಂದಿರುವುದು ನಿಜವೇ ;

(ಉ) ಈ ತಾರತಮ್ಯವನ್ನು ಹೋಗಲಾಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಬೆಂಗಳೂರು ವಿಶ್ವವಿದ್ಯಾಲಯದ ಹೊರ ಗುತ್ತಿಗೆ ನೌಕರರ ವೇತನದ ಬಗ್ಗೆ

**ಶ್ರೀ ಕೆ. ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೨೦೩೪ (೨೩೩೭) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ವಿಶ್ವವಿದ್ಯಾಲಯದಲ್ಲಿ ಹೊರ ಗುತ್ತಿಗೆ ಆಧಾರದ ಮೇಲೆ ಕೆಲಸ ನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಈ ನೌಕರರಿಗೆ ವೇತನವನ್ನು ನಿಗದಿತ ಸಮಯಕ್ಕೆ ನೀಡಲಾಗುತ್ತಿದೆಯೇ ಅಥವಾ ವೇತನ ಬಾಕಿ ಇದೆಯೇ ;

(ಇ) ಗಾಂಧಿ ಅಧ್ಯಯನ ಕೇಂದ್ರ ಬೆಂಗಳೂರು ವಿಶ್ವವಿದ್ಯಾಲಯದಲ್ಲಿ ಹೊರ ಗುತ್ತಿಗೆ ಆಧಾರದ ಮೇಲೆ 'ಡಿ' ಗ್ರೂಪ್ ನೌಕರರಾಗಿ ಕೆಲಸ ನಿರ್ವಹಿಸುತ್ತಿರುವವರಿಗೆ ದಿನಾಂಕ: ೦೧.೧೦.೨೦೧೫ ರಿಂದ ೨೮.೦೨.೨೦೧೯ರವರೆಗೆ ವೇತನ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ಇವರಿಗೆ ಬಾಕಿ ವೇತನ ನೀಡಲು ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಶಾಲಾ ಕಟ್ಟಡಗಳ ದುರಸ್ತಿ ಕಾರ್ಯ ನೆರವೇರಿಸುವ ಬಗ್ಗೆ

**ಶ್ರೀ ಎಂ. ಪಿ ಸುನೀಲ್ ಸುಬ್ರಮಣಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೦೩೫ (೨೩೧೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ೨೦೧೮ ರಿಂದ ಇಲ್ಲಿಯವರೆಗೆ ಸರ್ವ ಶಿಕ್ಷಣ ಅಭಿಯಾನ ಯೋಜನೆಯಡಿ ಶಾಲಾ ಕಟ್ಟಡ ದುರಸ್ತಿ, ಕುಡಿಯುವ ನೀರು, ಶೌಚಾಲಯ ಮತ್ತು ಕಟ್ಟಡ ನಿರ್ವಹಣೆಗಳಿಗೆ ಬಿಡುಗಡೆ ಮಾಡಲಾದ ಅನುದಾನವೆಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಬಿಡುಗಡೆಯಾದ ಅನುದಾನದಲ್ಲಿ ಕೊಡಗು ಜಿಲ್ಲೆಯಲ್ಲಿ ನಡೆದ ಕಾಮಗಾರಿಗಳ ವಿವರ ಕಾಮಗಾರಿ ನಡೆಸಿದ ಶಾಲೆಗಳ ಹೆಸರಿನೊಂದಿಗೆ ಇದಕ್ಕೆ ಖರ್ಚಾದ ಅನುದಾನ ಹಾಗೂ ಪ್ರಸ್ತುತ ಉಳಿಕೆ ಅನುದಾನದ ವಿವರಗಳನ್ನು ನೀಡುವುದು ;

(ಇ) ಒಂದು ವೇಳೆ ಬಿಡುಗಡೆಗೆ ಬಾಕಿಯಿದ್ದಲ್ಲಿ ಬಾಕಿ ಮೊತ್ತವೆಷ್ಟು; ಯಾವ ನಿಗಧಿತ ಅವಧಿಯೊಳಗೆ ಅನುದಾನ ಬಿಡುಗಡೆ ಮಾಡಲಾಗುವುದು ?

## ಗ್ರಂಥಾಲಯ ಇಲಾಖೆಯಲ್ಲಿನ ಸೆಸ್ ಹಣದ ದುರ್ಬಳಕೆಯ ಬಗ್ಗೆ

**ಶ್ರೀ ಎಂ.ಪಿ ಸುನೀಲ್ ಸುಬ್ರಮಣಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೦೩೬ (೨೩೧೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದ ಗ್ರಂಥಾಲಯ ಇಲಾಖೆಗೆ ಸಂದಾಯವಾದ ಸೆಸ್ ಹಣವೆಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ಇಲಾಖೆಯು ಪಡೆದ ಈ ಹಣವನ್ನು ಯಾವ ಯಾವ ಕಾರ್ಯಗಳಿಗಾಗಿ ವೆಚ್ಚ ಮಾಡಲಾಗಿದೆ ; (ಜಿಲ್ಲಾವಾರು ಕಾಮಗಾರಿವಾರು, ಕೆಲಸ ನಿರ್ವಹಿಸಿದ ಗುತ್ತಿಗೆದಾರರ ವಿವರಗಳೊಂದಿಗೆ ವೆಚ್ಚದ ಸಂಪೂರ್ಣ ವಿವರಗಳನ್ನು ನೀಡುವುದು)

(ಇ) ಕಳೆದ ಮೂರು ವರ್ಷಗಳಲ್ಲಿ ಇಲಾಖೆಯು ಖರೀದಿಸಿದ ಪೀಠೋಪಕರಣಗಳೆಷ್ಟು; ಇದಕ್ಕಾಗಿ ವ್ಯಯಿಸಿದ ಹಣವೆಷ್ಟು? (ಜಿಲ್ಲಾವಾರು ಗುತ್ತಿಗೆದಾರರ ವಿವರ ನೀಡುವುದು ಹಾಗೂ ಕೊಡಗು ಜಿಲ್ಲೆಗೆ ಸಂಬಂಧಿಸಿದಂತೆ ಗ್ರಂಥಾಲಯಗಳವಾರು ವಿವರ ನೀಡುವುದು)

## ಕಲಬುರಗಿ ಜಿಲ್ಲೆಯ ಅರಣ್ಯ ಪ್ರದೇಶದ ಒತ್ತುವರಿ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೦೩೭ (೨೪೯) ಮಾನ್ಯ ಅರಣ್ಯ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಜಿಲ್ಲೆಯಲ್ಲಿರುವ ಅರಣ್ಯ ಪ್ರದೇಶವೆಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಅರಣ್ಯ ಪ್ರದೇಶವನ್ನು ಒತ್ತುವರಿ ಮಾಡುತ್ತಿರುವುದು ಸರಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಒತ್ತುವರಿ ಮಾಡಿರುವ ವಿಸ್ತೀರ್ಣ ಎಷ್ಟು ; ಮತ್ತು ಒತ್ತುವರಿ ಮಾಡಿರುವವರ ವಿರುದ್ಧ ದಾಖಲಾದ ಪ್ರಕರಣಗಳೆಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಅರಣ್ಯ ಪ್ರದೇಶದ ಒತ್ತುವರಿ ತಡೆಗಟ್ಟಲು ಸರಕಾರ ಕೈಗೊಂಡಿರುವ ಕ್ರಮಗಳೇನು ?

## ಆಯುಷ್ ಇಲಾಖಾ ಆಸ್ಪತ್ರೆಗಳು ಮತ್ತು ಸಿಬ್ಬಂದಿ ವರ್ಗದವರ ಬಗ್ಗೆ

**ಶ್ರೀ ಕೆ. ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–**

೨೦೩೮ (೨೫೯೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಆಯುಷ್ ಇಲಾಖೆ ಅಡಿಯಲ್ಲಿ ಸ್ಥಾಪಿತವಾಗಿರುವ ಆಸ್ಪತ್ರೆಗಳೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ಆಸ್ಪತ್ರೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ವೈದ್ಯರು, ಶುಶ್ರೂಷಕರು ಮತ್ತು ಇತರೆ ಸಿಬ್ಬಂದಿಗಳೆಷ್ಟು ;

(ಇ) ಈ ಆಯುಷ್ ಇಲಾಖೆ ಅಡಿಯಲ್ಲಿರುವ ಆಸ್ಪತ್ರೆಗಳಲ್ಲಿ ಗ್ರಾಮಾಂತರ ರೋಗಿಗಳಿಗೆ ಪ್ರಥಮ ಹಂತದ ಚಿಕಿತ್ಸೆ ನೀಡಲು ಸರ್ಕಾರ ಕೈಗೊಂಡಿರುವ ಕಾರ್ಯಕ್ರಮಗಳೇನು ; (ವಿವರ ನೀಡುವುದು)

(ಈ) ಕೇಂದ್ರ ಸರ್ಕಾರದಿಂದ ಆಯುಷ್ ಆಸ್ಪತ್ರೆಗಳ ನಿರ್ವಹಣೆ ಮತ್ತು ಆಯುಷ್ ಪದ್ಧತಿಯನ್ನು ಪ್ರಚಾರಗೊಳಿಸಲು ನೀಡಿರುವ ಅನುದಾನವೆಷ್ಟು ; ಬಳಕೆಯಾದ ಅನುದಾನವೆಷ್ಟು ? (ಸಂಪೂರ್ಣ ವಿವರ ನೀಡುವುದು)

## ರಾಜ್ಯದಲ್ಲಿ ಮಲೇರಿಯಾ ಕಾಯಿಲೆ ಉಲ್ಬಣಗೊಳ್ಳುತ್ತಿರುವ ಬಗ್ಗೆ

**ಶ್ರೀ ಕೆ. ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–**

೨೦೩೯ (೨೫೯೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ಹಲವು ಜಿಲ್ಲೆಗಳಲ್ಲಿ ಇತ್ತೀಚೆಗೆ ಹೆಚ್ಚುತ್ತಿರುವ ಮಲೇರಿಯಾ ರೋಗದ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಇಂತಹ ಪ್ರಕರಣಗಳು ಹೆಚ್ಚಾಗಿ ಮಕ್ಕಳಲ್ಲಿ ಕಂಡುಬರುತ್ತಿರುವುದು ನಿಜವೇ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಕಳೆದ ೩ ವರ್ಷಗಳಲ್ಲಿ ಹೆಚ್ಚುತ್ತಿರುವ ಮಲೇರಿಯಾ ಪ್ರಕರಣಗಳು ರಾಜ್ಯದ ನೀರಾವರಿ ಅಚ್ಚುಕಟ್ಟು ಪ್ರದೇಶಕ್ಕೆ ಹೊಂದಿರುವ ಜಿಲ್ಲೆಗಳಲ್ಲಿ ಕಂಡು ಬರುತ್ತಿರುವುದು ನಿಜವೇ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಇಂತಹ ಪರಿಸ್ಥಿತಿಯಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಯೋಜನೆ ಅಡಿಯಲ್ಲಿ ಈ ಮಲೇರಿಯಾ ರೋಗವನ್ನು ನಿಯಂತ್ರಿಸಲು ಕೈಗೊಂಡಿರುವ ಕ್ರಮಗಳೇನು ? (ಪೂರ್ಣ ವಿವರ ನೀಡುವುದು)

## Single Use Plastic ಅಡಿಯಲ್ಲಿ ಉಂಟಾಗುವ ವಾಯು ಮಾಲಿನ್ಯದ ಬಗ್ಗೆ

**ಶ್ರೀ ಕೆ. ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–**

೨೦೪೦ (೨೩೯೩) ಮಾನ್ಯ ಪ್ರವಾಸೋದ್ಯಮ ಹಾಗೂ ಪರಿಸರ ಮತ್ತು ಜೀವಿಪರಿಸ್ಥಿತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದೇಶದಲ್ಲಿ Single Use of Plastic ಅಡಿಯಲ್ಲಿ ಉಂಟಾಗಿರುವ ವಾಯು ಮಾಲಿನ್ಯವನ್ನು ತಡೆಯಲು ಕೇಂದ್ರ ಸರ್ಕಾರ ಯಾವುದಾದರೂ ನೀತಿ ರೂಪಿಸಿದೆಯೇ ; (ವಿವರ ನೀಡುವುದು)

(ಆ) ಹಾಗಿದ್ದಲ್ಲಿ, ರಾಜ್ಯ ಸರ್ಕಾರ Single Use of Plastic ನ್ನು ತಡೆ ಹಿಡಿಯುವ ಬಗ್ಗೆ ರೂಪಿಸಿರುವ ನಿಯಮಗಳು ಯಾವುವು ಮತ್ತು ಇವುಗಳ ಅನುಷ್ಠಾನ ಯಾವ ಹಂತದಲ್ಲಿದೆ ? (ವಿವರ ನೀಡುವುದು)

## STREET VENDORS ACT 2014 ರ ಬಗ್ಗೆ

**ಶ್ರೀ ಕೆ. ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–**

೨೦೪೧ (೧೩೯೦) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೇಂದ್ರ ಸರ್ಕಾರ ಜಾರಿಗೊಳಿಸಿರುವ ಕಾಯಿದೆ Street Vendors (Protection of Livelihood and Regulation of Street Vending) Act, 2014 ಅಡಿಯಲ್ಲಿ ಈ ಕಾನೂನು ಜಾರಿಗೊಳಿಸಲು ಅಗತ್ಯವಿರುವ ನಿಯಮಗಳನ್ನು ರೂಪಿಸಿದೆಯೇ ; (ವಿವರ ನೀಡುವುದು)

(ಆ) ಈ ಕಾಯಿದೆ ಅಡಿ ಪ್ರಸ್ತಾಪಿಸಿರುವಂತೆ ನಗರ–ಪಟ್ಟಣ ಪ್ರದೇಶದಲ್ಲಿ Town Vending Committees (TVC) ಗಳನ್ನು ರಚಿಸಲಾಗಿದೆಯೇ ; (ನಗರಪಟ್ಟಣವಾರು ವಿವರ ನೀಡುವುದು)

(ಇ) ಹಾಗಿದ್ದಲ್ಲಿ, ಬೀದಿ ವ್ಯಾಪಾರಿಗಳನ್ನು ಅವರ ಸ್ಥಾನಗಳಿಂದ ಹೊರಹಾಕುವುದು ತಪ್ಪಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಪದವಿ ಮತ್ತು ಸ್ನಾತಕೋತ್ತರ ಪದವೀಧರ ನಿರುದ್ಯೋಗಿಗಳ ಬಗ್ಗೆ

**ಶ್ರೀ ಆರ್.ಬಿ. ತಿಮ್ಮಾಪೂರ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೨೦೪೨ (೨೩೧೭) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರತಿ ವರ್ಷ ಪದವಿ ಮತ್ತು ಸ್ನಾತಕೋತ್ತರ ಪದವಿಗಳನ್ನು ಪೂರೈಸುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ;

(ಆ) ಎಷ್ಟು ಜನ ಪದವೀಧರರು ಮತ್ತು ಸ್ನಾತಕೋತ್ತರ ಪದವೀಧರರಿಗೆ ವರ್ಷವಾರು ಉದ್ಯೋಗಾವಕಾಶಗಳು ಲಭಿಸುತ್ತಿವೆ ;

(ಇ) ಉದ್ಯೋಗ ಸೃಜನೆಗಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಕಳೆದ ಎರಡು ವರ್ಷಗಳಲ್ಲಿ ಯಾವ ಯಾವ ಇಲಾಖೆಗಳಲ್ಲಿ ಎಷ್ಟು ಉದ್ಯೋಗವನ್ನು ಒದಗಿಸಿದೆ ; ಇಲ್ಲದಿದ್ದಲ್ಲಿ ಕಾರಣಗಳೇನು ?

## ಅನುದಾನಿತ ಮತ್ತು ಅನುದಾನ ರಹಿತ ಶಾಲೆಗಳ ಬಗ್ಗೆ

**ಶ್ರೀ ಆರ್.ಬಿ. ತಿಮ್ಮಾಪೂರ (ವಿಧಾನ ಸಭೆಯಿಂದ ಚುನಾಯಿತರಾದವರು):–**

೨೦೪೩ (೨೩೧೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅನುದಾನಿತ ಮತ್ತು ಅನುದಾನ ರಹಿತ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರ ಸಮಸ್ಯೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಅವರ ಬೇಡಿಕೆಗಳನ್ನು ಈಡೇರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ವಿವಿಧ ಸಂಘ–ಸಂಸ್ಥೆಗಳ ಮತ್ತು ಕಲಾವಿದರಿಗೆ ನೀಡುವ ಧನಸಹಾಯ ಕುರಿತು

**ಶ್ರೀ ಯು.ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) :–**

೨೦೪೪ (೨೩೬೩) ಮಾನ್ಯ ಅರಣ್ಯ, ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಸಕ್ತ ಸಾಲಿನಲ್ಲಿ ವಿವಿಧ ಸಂಘ ಸಂಸ್ಥೆಗಳು ಹಾಗೂ ಕಲಾವಿದರಿಂದ ಧನ ಸಹಾಯ ಕೋರಿ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು; ಎಷ್ಟು ಅರ್ಜಿಗಳಿಗೆ ಧನ ಸಹಾಯವನ್ನು ನೀಡಲಾಗಿದೆ; (ಜಿಲ್ಲಾವಾರು ಮಾಹಿತಿಯನ್ನು ನೀಡುವುದು)

(ಆ) ಧನ ಸಹಾಯ ಕೋರಿ ಬಂದಿರುವ ಅರ್ಜಿಗಳ ಪರಿಶೀಲನೆಯನ್ನು ಮಾಡುವಾಗ ಅನುಸರಿಸುವ ಮಾನದಂಡವೇನು?

## ಕೊಡಗು ಜಿಲ್ಲೆಯಲ್ಲಿರುವ ಸರ್ಕಾರಿ ಆಸ್ಪತ್ರೆಗಳಲ್ಲಿ ಮೂಲಭೂತ ಸೌಕರ್ಯಗಳ ಕೊರತೆ ಹಾಗೂ ತಜ್ಞ ವೈದ್ಯರ ಕೊರತೆ ಇರುವ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು):–**

೨೦೪೫ (೨೩೭೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆಯಲ್ಲಿರುವ ಸರ್ಕಾರಿ ಆಸ್ಪತ್ರೆಗಳ ಸಂಖ್ಯೆ ಎಷ್ಟು; ಮತ್ತು ಅವು ಯಾವುವು ;

(ಆ) ಸದರಿ ಆಸ್ಪತ್ರೆಗಳಲ್ಲಿ ಮೂಲಭೂತ ಸೌಕರ್ಯಗಳ ಕೊರತೆ ಹಾಗೂ ತಜ್ಞ ವೈದ್ಯರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಸದರಿ ಆಸ್ಪತ್ರೆಗಳಲ್ಲಿ ಇರುವ ಮೂಲಭೂತ ಸೌಕರ್ಯಗಳ ಕೊರತೆಗಳು ಯಾವುವು ಹಾಗೂ ಯಾವೆಲ್ಲಾ ಯಾವ ತಜ್ಞ ವೈದ್ಯರ ಹುದ್ದೆಗಳು ಖಾಲಿ ಇವೆ ; (ಆಸ್ಪತ್ರೆವಾರು ಮಾಹಿತಿ ನೀಡುವುದು)

(ಈ) ಕೊರತೆ ಇರುವ ಮೂಲಭೂತ ಸೌಕರ್ಯಗಳನ್ನು ಪೂರೈಸಲು ಹಾಗೂ ತಜ್ಞ ವೈದ್ಯರನ್ನು ನೇಮಿಸಲು ಕ್ರಮ ಕೈಗೊಳ್ಳಲಾಗಿದೆಯೇ ?

## ಕೋವಿಡ್ ಚಿಕಿತ್ಸೆ ನೀಡಿದ ಆಸ್ಪತ್ರೆಗಳ ಕುರಿತು

**ಶ್ರೀ ಯು.ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) :–**

೨೦೪೬ (೨೩೨೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರಿನಲ್ಲಿ ಕೋವಿಡ್ ಚಿಕಿತ್ಸೆ ನೀಡಿದ ಆಸ್ಪತ್ರೆಗಳಾವುವು ; ಈ ಆಸ್ಪತ್ರೆಗಳಲ್ಲಿ ಎಷ್ಟು ಜನ ಚಿಕಿತ್ಸೆ ಪಡೆದಿದ್ದಾರೆ; ಇದಕ್ಕಾಗಿ ಬಿಬಿಎಂಪಿ ವತಿಯಿಂದ ಪಾವತಿಸಲಾದ ಮೊತ್ತವೆಷ್ಟು ;

(ಆ) ಈಗಾಗಲೇ ಎಷ್ಟು ಆಸ್ಪತ್ರೆಗಳಿಗೆ ಹಣ ಬಿಡುಗಡೆ ಮಾಡಲಾಗಿದೆ; ಹಣ ಬಿಡುಗಡೆಯಾಗಲು ಬಾಕಿಯಿರುವ ಆಸ್ಪತ್ರೆಗಳು ಎಷ್ಟು ;

(ಇ) ಸರ್ಕಾರ ಹಣ ಪಾವತಿಸಿದ್ದರೂ ಸೋಂಕಿತರಿಂದ ಹಣ ವಸೂಲಿ ಮಾಡಿರುವ ಆಸ್ಪತ್ರೆಗಳ ಬಗ್ಗೆ ದೂರುಗಳು ಬಂದಿವೆಯೇ ; ಅಂತಹ ಆಸ್ಪತ್ರೆಗಳ ಮೇಲೆ ಕೈಗೊಂಡ ಕ್ರಮಗಳೇನು ?

## ಸಗಟು ಪುಸ್ತಕ ಖರೀದಿಗೆ ಅನುದಾನ

**ಶ್ರೀ ಯು.ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) :–**

೨೦೪೭ (೨೩೨೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಿಂದ ರಾಜ್ಯ ಸರ್ಕಾರ ಗ್ರಂಥಾಲಯಗಳ ಪುಸ್ತಕ ಖರೀದಿಗೆ ಒದಗಿಸುತ್ತಿರುವ ಅನುದಾನವೆಷ್ಟು ;

(ಆ) ಈ ಪೈಕಿ ಬಳಕೆ ಮಾಡಿದ ಅನುದಾನವೆಷ್ಟು ಉಳಿಕೆಯಾದ ಅನುದಾನ ಎಷ್ಟು ;

(ಇ) ಪ್ರಸಕ್ತ ಬಜೆಟ್‌ನಲ್ಲಿ ಸಗಟು ಪುಸ್ತಕಗಳ ಖರೀದಿಗೆ ಹೆಚ್ಚಿನ ಅನುದಾನವನ್ನು ಒದಗಿಸಲು ಕ್ರಮ ಕೈಗೊಳ್ಳಲಾಗುವುದೇ ?

## ಮಂಡ್ಯ ಜಿಲ್ಲೆಯಲ್ಲಿ ಪ್ರವಾಸೋದ್ಯಮ ಇಲಾಖೆಯಿಂದ ಗುರುತಿಸಲಾದ ಪ್ರವಾಸಿ ತಾಣಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೦೪೮ (೨೪೦೫) ಮಾನ್ಯ ಪ್ರವಾಸೋದ್ಯಮ ಮತ್ತು ಪರಿಸರ ಮತ್ತು ಜೀವಿ ಪರಿಸ್ಥಿತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಡ್ಯ ಜಿಲ್ಲೆಯಲ್ಲಿ ಪ್ರವಾಸೋದ್ಯಮ ಇಲಾಖೆಯಿಂದ ಗುರುತಿಸಲಾದ ಪ್ರವಾಸಿ ತಾಣಗಳು ಯಾವುವು ; ಇವುಗಳ ಕುರಿತು ಅಂತರ್ಜಾಲದ ಮೂಲಕ ಮಾಹಿತಿಯನ್ನು ಒದಗಿಸಲು ಇಲಾಖೆಯಿಂದ ಕ್ರಮ ವಹಿಸಲಾಗಿದೆಯೇ ;

(ಆ) ಈ ಪ್ರವಾಸಿ ತಾಣಗಳನ್ನು ಪ್ರವಾಸಿ ಸ್ನೇಹಿಯಾಗಿಸಲು ಯಾವ ಯೋಜನೆಯನ್ನು ಹಮ್ಮಿಕೊಳ್ಳಲಾಗಿದೆ ; ಕಳೆದ ಮೂರು ವರ್ಷಗಳಲ್ಲಿ ಅಭಿವೃದ್ಧಿಗೆ ಮೀಸಲಿರಿಸಿದ ಅನುದಾನ ಹಾಗೂ ಬಿಡುಗಡೆಯಾದ ಅನುದಾನವೆಷ್ಟು ; (ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

(ಇ) ಮಂಡ್ಯ ಜಿಲ್ಲೆಯನ್ನು ಟೂರಿಸಂ ಹಬ್ ಆಗಿಸಲು ಯೋಜನೆ ತಯಾರಿಸಲಾಗಿದೆಯೇ ; ಹಾಗಿದ್ದಲ್ಲಿ, ಯೋಜನೆಯ ಅಂದಾಜು ಮೊತ್ತ ಎಷ್ಟು ಹಾಗೂ ಯೋಜನೆಯನ್ನು ಅನುಷ್ಠಾನಗೊಳಿಸುವುದು ಯಾವಾಗ ? (ವಿವರ ನೀಡುವುದು)

## ವೃಂದ ಮತ್ತು ನೇಮಕಾತಿ ನಿಯಮಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೦೪೯ (೨೪೦೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಾರ್ವಜನಿಕ ಶಿಕ್ಷಣ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳ ಅನ್ವಯ ಇಲಾಖೆಯ ಕಛೇರಿಗಳಲ್ಲಿನ ಲೆಕ್ಕಶಾಖೆಯ ಅಧೀಕ್ಷಕರ ಹುದ್ದೆಗೆ ಎಸ್.ಎ.ಎಸ್ ಪರೀಕ್ಷೆ ತೇರ್ಗಡೆ ಹೊಂದುವುದು ಕಡ್ಡಾಯವೇ ;

(ಆ) ಹಾಗಿದ್ದಲ್ಲಿ, ನಿರ್ದೇಶಕರು (ಪರೀಕ್ಷೆಗಳು) ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ಮತ್ತು ನಿರ್ದೇಶಕರು, ರಾಜ್ಯ ಶಿಕ್ಷಣ, ಸಂಶೋಧನೆ ಮತ್ತು ತರಬೇತಿ ಇಲಾಖೆ ಕಛೇರಿಗಳಲ್ಲಿನ ಲೆಕ್ಕಪತ್ರ ಶಾಖೆಯ ಅಧೀಕ್ಷಕರ ಹುದ್ದೆಗಳನ್ನು ಎಸ್.ಎ.ಎಸ್ ಪರೀಕ್ಷೆ ತೇರ್ಗಡೆ ಹೊಂದಿದ ಅಧೀಕ್ಷಕರುಗಳ ಮೂಲಕ ತುಂಬುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಈ ನ್ಯೂನತೆಗಳನ್ನು ಸರಿಪಡಿಸಲು ಸರ್ಕಾರವು ಯಾವ ಕ್ರಮವನ್ನು ಕೈಗೊಳ್ಳಲಾಗುವುದು ? (ವಿವರ ನೀಡುವುದು)

## ಅಧ್ಯಾಪಕರು ಮತ್ತು ಸಿಬ್ಬಂದಿ ಕೊರತೆ ಇರುವ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೦೫೦ (೨೪೦೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆಯ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಗಳಲ್ಲಿ ಅಧ್ಯಾಪಕರ ಮತ್ತು ಸಿಬ್ಬಂದಿಯ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು ; ಈ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳಾವುವು ;

(ಆ) ಮಂಡ್ಯ ಜಿಲ್ಲೆಯ ಸರ್ಕಾರಿ ಆಸ್ಪತ್ರೆಯಲ್ಲಿ ಯಾವ ಯಾವ ರೋಗಕ್ಕೆ/ ಖಾಯಿಲೆಗೆ ಸರ್ಜರಿ ಮಾಡಲಾಗುವುದು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಮಂಡ್ಯ ಜಿಲ್ಲೆಯಲ್ಲಿ ಡಯಾಲಿಸಿಸ್ ಕೇಂದ್ರದಲ್ಲಿ ಎಷ್ಟು ಯಂತ್ರಗಳಿವೆ; ಅದರಲ್ಲಿ ಎಷ್ಟು ಯಂತ್ರಗಳು ಕಾರ್ಯನಿರ್ವಹಿಸುತ್ತಿವೆ ; (ವಿವರ ನೀಡುವುದು)

(ಈ) ಮಂಡ್ಯ ಜಿಲ್ಲೆಯಲ್ಲಿ ಇಲ್ಲಿಯವರೆವಿಗೂ "ಡಿ" ಗುಂಪಿನ ನೌಕರರನ್ನು ಹಾಗೂ ದಾದಿಯರನ್ನು ಹೊರಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲಾಗಿದೆಯೇ ; ಮಾಡಿಕೊಂಡಿದ್ದಲ್ಲಿ, ಅದರ ವಿವರ ಹಾಗೂ ನಿಯಮವನ್ನು ತಿಳಿಸುವುದು ?

## ಮಂಡ್ಯ ಜಿಲ್ಲೆಯಲ್ಲಿ ನೋಂದಾಯಿಸಿರುವ ಕಾರ್ಮಿಕರ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೦೫೧ (೨೪೦೮) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಡ್ಯ ಜಿಲ್ಲೆಯ ಕಾರ್ಮಿಕ ಇಲಾಖೆಯಲ್ಲಿ ನೋಂದಾಯಿಸಿರುವ ಕಾರ್ಮಿಕರ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರವಾದ ಮಾಹಿತಿ ನೀಡುವುದು)

(ಆ) ಕಾರ್ಮಿಕರ ಶೈಕ್ಷಣಿಕ, ಆರೋಗ್ಯ, ರಸ್ತೆ, ಅಪಘಾತ, ಅಂತ್ಯಕ್ರಿಯೆ ವೆಚ್ಚ, ಮದುವೆ ವೆಚ್ಚ ಇವುಗಳಿಗೆ ಕಳೆದ ಮೂರು ವರ್ಷಗಳಿಂದ ಬಿಡುಗಡೆಯಾದ ಅನುದಾನ ಎಷ್ಟು ; (ತಾಲ್ಲೂಕುವಾರು ಫಲಾನುಭವಿಗಳವಾರು ವಿವರ ನೀಡುವುದು)

(ಇ) ಮಂಡ್ಯ ಜಿಲ್ಲೆಯಲ್ಲಿ ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆಯಡಿಯಲ್ಲಿ ಬಿಡುಗಡೆಯಾದ ಅನುದಾನ ಎಷ್ಟು ; ಹಾಗೂ ಫಲಾನುಭವಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಈ) ಜಿಲ್ಲೆಯಲ್ಲಿ ಆಶಾ ದೀಪ ಕಾರ್ಮಿಕ ಸಹಾಯ ಹಸ್ತ ಯೋಜನೆಯಡಿಯಲ್ಲಿ ಬಿಡುಗಡೆಯಾದ ಅನುದಾನ ಎಷ್ಟು; ಹಾಗೂ ಫಲಾನುಭವಿಗಳ ಸಂಖ್ಯೆ ಎಷ್ಟು ? (ತಾಲ್ಲೂಕುವಾರು ಫಲಾನುಭವಿಗಳ ಮಾಹಿತಿ ನೀಡುವುದು)

## ಖಾಸಗಿ ಕಾಲೇಜುಗಳಲ್ಲಿ ಸರ್ಕಾರ ನಿಯಮಾವಳಿ ಅನುಸರಿಸಿ ಶೇ.೩೦ರಷ್ಟು ಶುಲ್ಕ ಮನ್ನಾ ಮಾಡುವ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೦೫೨ (೨೪೦೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೨೦–೨೧ನೇ ಸಾಲಿನಲ್ಲಿ ಮಂಡ್ಯ ಜಿಲ್ಲೆಯಲ್ಲಿರುವ ಎಲ್ಲಾ ಖಾಸಗಿ ಶಾಲೆಗಳು ಸರ್ಕಾರದ ನಿಯಮಾವಳಿ ಅನುಸರಿಸಿ ಶೇಕಡಾ ೩೦ರಷ್ಟು ಶುಲ್ಕ ಮನ್ನಾ ಮಾಡಿವೆಯೇ ;

(ಆ) ಶಿಕ್ಷಣ ಶುಲ್ಕದಲ್ಲಿ ಶೇಕಡಾ ೩೦ರಷ್ಟು ಶುಲ್ಕವನ್ನು ಮನ್ನಾ ಮಾಡದೇ ಪೂರ್ತಿ ಹಣ ವಸೂಲಿ ಮಾಡಿರುವ ಶಾಲೆಗಳ ವಿರುದ್ಧ ಸರ್ಕಾರ ಕೈಗೊಂಡಿರುವ ಅಥವಾ ಕೈಗೊಳ್ಳಲಿರುವ ಕ್ರಮಗಳೇನು ; (ಮಾಹಿತಿ ಒದಗಿಸುವುದು)

(ಇ) ಜಿಲ್ಲಾ ವ್ಯಾಪ್ತಿಯಲ್ಲಿ ಖಾಸಗಿ ಶಾಲೆಗಳು ಈ ನಿಯಮ ಉಲ್ಲಂಘಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಅಂತಹ ಶಾಲೆಗಳ ಆಡಳಿತ ಮಂಡಳಿ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಂಡಿದೆ ? (ತಾಲ್ಲೂಕುವಾರು ಮಾಹಿತಿ ಒದಗಿಸುವುದು)

## ಹೊಸದಾಗಿ ಖರೀದಿಸಿರುವ ವೈದ್ಯಕೀಯ ಉಪಕರಣ ಬಗ್ಗೆ

**ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೦೫೩ (೨೩೦೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಒಂದು ವರ್ಷದಿಂದ ಕಾರವಾರ ಜಿಲ್ಲೆಯಲ್ಲಿ ಹೊಸದಾಗಿ ರಚಿಸಲಾದ ತಾಲ್ಲೂಕು ಆಸ್ಪತ್ರೆಗಳಿಗೆ ಖರೀದಿಸಲಾಗಿರುವ ವೈದ್ಯಕೀಯ ಉಪಕರಣಗಳಾವುವು ; (ಮಾಹಿತಿ ನೀಡುವುದು)

(ಆ) ಪ್ರತಿ ಆಸ್ಪತ್ರೆಗೆ ಸರಾಸರಿಯಾಗಿ ಎಷ್ಟೆಷ್ಟು ಮೊತ್ತದ ವಿವಿಧ ಉಪಕರಣಗಳನ್ನು ಖರೀದಿಸಲಾಗಿದೆ ; (ತಾಲ್ಲೂಕುವಾರು ಸಂಪೂರ್ಣ ವಿವರ ಒದಗಿಸುವುದು)

(ಇ) ಹೊಸದಾಗಿ ಖರೀದಿಸಲಾದ ವೈದ್ಯಕೀಯ ಉಪಕರಣಗಳನ್ನು ನಿರ್ವಹಿಸಲು ನುರಿತ ಅಧಿಕಾರಿ/ಸಿಬ್ಬಂದಿಯನ್ನು ನೇಮಕ ಮಾಡಲಾಗಿದೆಯೇ ; ಹಾಗಿದ್ದಲ್ಲಿ, ಎಷ್ಟು ಜನರನ್ನು ನೇಮಿಸಿಕೊಳ್ಳಲಾಗಿದೆ ; (ತಾಲ್ಲೂಕುವಾರು/ಹುದ್ದೆವಾರು ವಿವರ ನೀಡುವುದು)

(ಈ) ನೇಮಕ ಮಾಡಿಕೊಳ್ಳದಿದ್ದಲ್ಲಿ, ಸಾರ್ವಜನಿಕರು ಆರೋಗ್ಯ ಸೇವೆಯಿಂದ ವಂಚಿತರಾಗುವುದಿಲ್ಲವೇ ; ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು ?

## ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಘನತ್ಯಾಜ್ಯ ಘಟಕದಲ್ಲಿ ಕಾರ್ಯನಿರ್ವಹಿಸುತ್ತಿರುವ ಪೌರಕಾರ್ಮಿಕರ ಕುರಿತು ಮಾಹಿತಿ

**ಶ್ರೀ ಕೆ. ಹರೀಶ್ ಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೨೦೫೪ (೨೩೨೪) ಮಾನ್ಯ ಕಾರ್ಮಿಕ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ದಕ್ಷಿಣ ಕನ್ನಡ ಜಿಲ್ಲೆಯ ವ್ಯಾಪ್ತಿಗೆ ಒಳಪಟ್ಟಿರುವ ಘನತ್ಯಾಜ್ಯ ಘಟಕದಲ್ಲಿ ಹತ್ತು ವರ್ಷಕ್ಕೆ ಮೇಲ್ಪಟ್ಟು ಕಾರ್ಯನಿರ್ವಹಿಸುತ್ತಿರುವ ಪೌರಕಾರ್ಮಿಕರಿಗೆ ಯಾವುದೇ ಕನಿಷ್ಠ ಸೇವಾ ಭದ್ರತೆ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಕುರಿತಂತೆ ಸರ್ಕಾರ ಕೈಗೊಂಡ ಕ್ರಮಗಳೇನು ? (ಸಂಪೂರ್ಣ ಮಾಹಿತಿ ಒದಗಿಸುವುದು)

## ಶಿಕ್ಷಣಾಧಿಕಾರಿಗಳಿಗೆ ಸ್ಥಾನಪನ್ನ ಬಡ್ತಿ ನೀಡುವ ಬಗ್ಗೆ

**ಶ್ರೀ ನಸೀರ್ ಅಹ್ಮದ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೨೦೫೫ (೨೩೪೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಶಿಕ್ಷಣ ಇಲಾಖೆಯ ಅಧಿಸೂಚನೆ ಸಂಖ್ಯೆ: ಇಡಿ ೧೫೫ ಡಿಜಿಎಂ ೨೦೧೭ ದಿನಾಂಕ: ೦೨.೦೨.೨೦೧೮ ರಲ್ಲಿ ಶಿಕ್ಷಣ ಇಲಾಖೆಯ ಗ್ರೂ.ಪ್ 'ಬಿ' ವೃಂದದ ಮುಖ್ಯ ಶಿಕ್ಷಕರು ಹಾಗೂ ತತ್ಸಮಾನ ವೃಂದದ ಹುದ್ದೆಗಳಿಂದ ಗ್ರೂಪ್ 'ಎ' ವೃಂದದ ಶಿಕ್ಷಣಾಧಿಕಾರಿ/ ತತ್ಸಮಾನ ವೃಂದದ ಹುದ್ದೆಗೆ, ನಿಯಮ ೩೨ರಡಿ ಸ್ವತಂತ್ರ ಪ್ರಭಾರದಲ್ಲಿರಿಸಿದ್ದ ೬೯ ಅಧಿಕಾರಿಗಳ ಪೈಕಿ ಕೆಲವರುಗಳಿಗೆ

ಮಾತ್ರ ಸ್ಥಾನಪನ್ನ ಬಡ್ತಿ ನೀಡಿ, ಉಳಿದವರಿಗೆ ಸುಮಾರು ೩ ವರ್ಷಗಳು ಕಳೆದರೂ ಇದುವರೆವಿಗೂ ಸ್ಥಾನಪನ್ನ ಬಡ್ತಿ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹೌದಾದಲ್ಲಿ, ಸದರಿ ಅಧಿಸೂಚನೆಯಲ್ಲಿರುವ ಎಷ್ಟು ಅಧಿಕಾರಿಗಳಿಗೆ ಸ್ಥಾನಪನ್ನ ಬಡ್ತಿ ನೀಡಲಾಗಿದೆ ; (ಆದೇಶದ ಪ್ರತಿ ನೀಡುವುದು)

(ಇ) ಇನ್ನೂ ಎಷ್ಟು ಅಧಿಕಾರಿಗಳಿಗೆ ಸ್ಥಾನಪನ್ನ ಬಡ್ತಿ ನೀಡಬೇಕಾಗಿರುತ್ತದೆ; ಇದುವರೆವಿಗೂ ಸ್ಥಾನಪನ್ನ ಬಡ್ತಿ ನೀಡದಿರಲು ಕಾರಣಗಳೇನು ; (ಅವರ ಹೆಸರುಗಳ ಸಮೇತ ಸಂಪೂರ್ಣ ಮಾಹಿತಿ ನೀಡುವುದು)

(ಈ) ಯಾವ ಕಾಲಮಿತಿಯೊಳಗೆ ಇವರುಗಳಿಗೆ ಸ್ಥಾನಪನ್ನ ಬಡ್ತಿ ನೀಡಲಾಗುವುದು ? (ಮಾಹಿತಿ ಒದಗಿಸುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಸಾಧಿಸಿದ ಗುರಿ ಮತ್ತು ಸಾಧನೆಗಳ ಬಗ್ಗೆ

**ಶ್ರೀ ಬಿ. ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೦೫೬ (೨೩೪೫) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಕೌಶಲ್ಯಾಭಿವೃದ್ಧಿ, ಜೀವನೋಪಾಯ ಇಲಾಖೆಯಿಂದ ಸಾಧಿಸಿದ ಗುರಿ ಮತ್ತು ಸಾಧನೆಗಳೇನು; ಜಿಲ್ಲಾವಾರು ಫಲಾನುಭವಿಗಳೆಷ್ಟು ; (ಸಂಪೂರ್ಣ ವಿವರ ನೀಡುವುದು)

(ಆ) ಮೇಲ್ಕಂಡ ಜಿಲ್ಲೆಗಳಲ್ಲಿ ಶೇಕಡ ಎಷ್ಟು ಜನರಿಗೆ ಈ ಇಲಾಖೆಯಿಂದ ಅನುಕೂಲವಾಗಿದೆ ? (ಸಂಪೂರ್ಣ ವಿವರ ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ ಸರ್ಕಾರಿ ಆಸ್ಪತ್ರೆಗಳ ಬಗ್ಗೆ

**ಶ್ರೀ ಬಿ. ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೦೫೭ (೨೩೬೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಪ್ರಸ್ತುತ ಕಾರ್ಯ ನಿರ್ವಹಿಸುತ್ತಿರುವ ಸರ್ಕಾರಿ ಆಸ್ಪತ್ರೆಗಳ ಸಂಖ್ಯೆ ಎಷ್ಟು ; ಅವು ಯಾವುವು; (ವಿವರ ನೀಡುವುದು)

(ಆ) ಸದರಿ ಆಸ್ಪತ್ರೆಗಳಲ್ಲಿ ಮಂಜೂರಾದ, ಕರ್ತವ್ಯ ನಿರ್ವಹಿಸುತ್ತಿರುವ ಹಾಗೂ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; (ಆಸ್ಪತ್ರೆವಾರು ವಿವರ ನೀಡುವುದು)

(ಇ) ಯಾವ ಕಾಲ ಮಿತಿಯೊಳಗೆ ಖಾಲಿ ಇರುವ ಹುದ್ದೆಗಳನ್ನು ಭರ್ತಿಮಾಡಿ ಸಾರ್ವಜನಿಕರಿಗೆ ಆಗುತ್ತಿರುವ ತೊಂದರೆಯನ್ನು ನಿವಾರಿಸಲಾಗುವುದು ?

## ರಾಜ್ಯದಲ್ಲಿನ ಆನೆ ಶಿಬಿರಗಳು ಹಾಗೂ ಮಾವುತರ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು)**

೨೦೫೮ (೨೩೮೦) ಮಾನ್ಯ ಅರಣ್ಯ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಆನೆ ಶಿಬಿರಗಳ ಸಂಖ್ಯೆ ಎಷ್ಟು ;

(ಆ) ರಾಜ್ಯದಲ್ಲಿರುವ ಸಾಕಾನೆಗಳ ಹಾಗೂ ಕಾಡಾನೆಗಳು ಎಷ್ಟು ;

(ಇ) ಪ್ರವಾಸಿಗರು ಭೇಟಿ ನೀಡಬಹುದಾದ ಆನೆ ಶಿಬಿರಗಳು ಯಾವುವು ;

(ಈ) ಆನೆಗಳ ಮಾವುತರ ಹಾಗೂ ಅವರ ಕುಟುಂಬದ ಹಿತರಕ್ಷಣೆಗಾಗಿ ಸರ್ಕಾರ ಕೈಗೊಂಡ ಯೋಜನೆ ಕ್ರಮಗಳಾವುವು ;

(ಉ) ಮಾವುತರಿಗೆ ನೀಡುತ್ತಿರುವ ಸಂಬಳ ಎಷ್ಟು? (ಮಾಹಿತಿ ನೀಡುವುದು)

## ಮೈಸೂರು ಚಾಮರಾಜನಗರ ಜಿಲ್ಲೆಗಳಲ್ಲಿ ಅರಣ್ಯ ಪ್ರದೇಶಕ್ಕೆ ಬೆಂಕಿ ಬಿದ್ದಿರುವ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೦೫೯ (೨೩೨೬) ಮಾನ್ಯ ಅರಣ್ಯ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಕಳೆದ ಒಂದು ತಿಂಗಳಿಂದ ಎಲ್ಲೆಲ್ಲಿ ಅರಣ್ಯಕ್ಕೆ ಬೆಂಕಿ ಬಿದ್ದಿವೆ ; ಈ ಕಾಡ್ಗಿಚ್ಚಿನಿಂದ ನಾಶವಾಗಿರುವ ಅರಣ್ಯ ಪ್ರದೇಶದ ವಿಸ್ತೀರ್ಣ ಎಷ್ಟು ; ಈ ಅರಣ್ಯ ನಾಶದಿಂದ ಉಂಟಾಗಿರುವ ನಷ್ಟ ಹಾಗೂ ಪ್ರಾಣಿ ಪಕ್ಷಿಗಳ ಜೀವಕ್ಕೆ ಹಾನಿ ಆಗಿದೆಯೇ ;

(ಆ) ಅರಣ್ಯ ಬೆಂಕಿಯನ್ನು ತಡೆಯಲು ಯಾವ ಯಾವ ಕ್ರಮ ತೆಗೆದುಕೊಳ್ಳಲಾಗಿದೆ ; ಮುಂಬರುವ ಬಿರುಬೇಸಗೆಯ ದಿನಗಳಲ್ಲಿ ಅರಣ್ಯಕ್ಕೆ ಬೆಂಕಿ ಬೀಳುವ ಸಂಭವ ಹೆಚ್ಚಾಗಿರುವುದರಿಂದ ಇದನ್ನು ತಡೆಗಟ್ಟಲು ಸೂಕ್ತ ಮುಂಜಾಗರೂಕತೆ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆಯೇ ? (ವಿವರ ಒದಗಿಸುವುದು)

## ಮೈಸೂರು ನಗರದಲ್ಲಿ ಕಿದ್ವಾಯಿ ಕ್ಯಾನ್ಸರ್ ಆಸ್ಪತ್ರೆಯ ಸ್ಥಾಪನೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೦೬೦ (೨೩೨೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮೈಸೂರು ನಗರದಲ್ಲಿ ಕಿದ್ವಾಯಿ ಕ್ಯಾನ್ಸರ್ ಆಸ್ಪತ್ರೆಯ ಘಟಕ ಸ್ಥಾಪಿಸಲು ಕ್ರಮ ತೆಗೆದುಕೊಳ್ಳಲಾಗುವುದೇ ;

(ಆ) ಮೈಸೂರಿನಲ್ಲಿ ಅಖಿಲ ಭಾರತ ವೈದ್ಯಕೀಯ ವಿಜ್ಞಾನ ಸಂಸ್ಥೆಯ (ಏಮ್ಸ್) ಘಟಕ ಸ್ಥಾಪಿಸಲು ಕ್ರಮ ತೆಗೆದುಕೊಳ್ಳಲಾಗುವುದೇ ?

## ಜೆ.ಓ.ಸಿ ಯ ವಿಲೀನ ವಂಚಿತ ೫೩೦ ಬೋಧಕ ಮತ್ತು ಬೋಧಕೇತರರನ್ನು ವಿಲೀನಗೊಳಿಸುವ ಕುರಿತು

**ಶ್ರೀ ಸುನೀಲ್ ಗೌಡ ಬಸನಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೦೬೧ (೨೩೮೧+೨೩೬೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಜೆ.ಓ.ಸಿ ಯಲ್ಲಿ ಕಾರ್ಯನಿರ್ವಹಿಸುತ್ತಿದ್ದ ೩೭೪೬ ಸಿಬ್ಬಂದಿಗಳಲ್ಲಿ ೩೨೧೬ ಸಿಬ್ಬಂದಿಗಳು ವಿಲೀನಾತಿ ಹೊಂದಿದ್ದು ಉಳಿದ ೫೩೦ ಜನರು ವಿಲೀನಾತಿ ಪ್ರಕ್ರಿಯೆಯಿಂದ ಹೊರಗುಳಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ಪ್ರಕ್ರಿಯೆಯಿಂದ ಹೊರಗುಳಿದ ೫೩೦ ಜನ ಬೋಧಕ ಮತ್ತು ಬೋಧಕೇತರರರನ್ನು ಜೆ.ಓ.ಸಿ ವಿಲೀನ ವಿಧೇಯಕವನ್ನು ತಿದ್ದುಪಡಿ ಮಾಡಿ ವಿಲೀನಗೊಳಿಸುವ ಬೇಡಿಕೆಯು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಸದರಿ ಸಿಬ್ಬಂದಿಗಳನ್ನು ವಿಲೀನಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಖಾಯಂಗೊಳಿಸುವ/ವಿಲೀನಗೊಳಿಸುವ ಪ್ರಕ್ರಿಯೆಯಿಂದ ಹೊರಗುಳಿದ ಸದರಿ ೫೩೦ ಜನ ಸಿಬ್ಬಂದಿಯು ತೀವ್ರ ಸಂಕಷ್ಟದಲ್ಲಿರುವುದರಿಂದ ಅವರುಗಳನ್ನು ವಿಲೀನಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಮಾಲಿನ್ಯ ನಿಯಂತ್ರಣ ಮಂಡಳಿಯವರ ನಿಯಮಗಳನ್ನು ಉಲ್ಲಂಘಿಸಿರುವ ಕುರಿತು

**ಶ್ರೀ ವಿವೇಕ್‌ರಾವ್ ವಸಂತರಾವ್ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೦೬೨ (೨೩೨೫) ಮಾನ್ಯ ಪ್ರವಾಸೋದ್ಯಮ ಮತ್ತು ಪರಿಸರ ಮತ್ತು ಜೀವಿ ಪರಿಸ್ಥಿತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೆ, ಭಾಗ್ಯಶ್ರೀ ಲಗಮವ್ವ ಶುಗರ್ಸ್ ಲಿ., ಬೆಕ್ಕೇರಿ ಗ್ರಾಮ, ರಾಯಭಾಗ ತಾಲ್ಲೂಕು, ಬೆಳಗಾವಿ ಜಿಲ್ಲೆ, ಇವರು ಮಾಲಿನ್ಯ ನಿಯಂತ್ರಣ ಮಂಡಳಿಯವರ ನಿಯಮಗಳನ್ನು ಉಲ್ಲಂಘಿಸಿ ಕಾರ್ಖಾನೆ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಹಿಂದೆ ಕಾನೂನು ಬಾಹಿರವಾಗಿ ನಡೆಯುತ್ತಿದ್ದ ಈ ಕಾರ್ಖಾನೆಯನ್ನು ಮಾಲಿನ್ಯ ನಿಯಂತ್ರಣ ಮಂಡಳಿಯವರು ಸೀಜ್ ಮಾಡಿದ್ದರೂ ಸಹ ಅಕ್ರಮವಾಗಿ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಸೀಜ್ ಮಾಡಿದ ಕಾರ್ಖಾನೆಯನ್ನು ಕಾನೂನುಬಾಹಿರವಾಗಿ ತೆರೆದು ನಡೆಸುತ್ತಿರುವ ಬಗ್ಗೆ ಮಾಲಿನ್ಯ ನಿಯಂತ್ರಣ ಮಂಡಳಿ, ಚಿಕ್ಕೋಡಿ, ಇವರು ಬೆಂಗಳೂರಿನ ಕೇಂದ್ರ ಕಛೇರಿಗೆ ವರದಿ ನೀಡಿದ್ದರೂ ಇದುವರೆಗೂ ಯಾವುದೇ ಕ್ರಮ ಕೈಗೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಈ ಕಾರ್ಖಾನೆಯ ವಿರುದ್ಧ ಇದುವರೆಗೂ ಯಾವ ಕ್ರಮ ಕೈಗೊಳ್ಳಲಾಗಿದೆ ; ಇಲ್ಲದಿದ್ದಲ್ಲಿ, ಕ್ರಮ ಕೈಗೊಳ್ಳದೇ ಇರುವುದಕ್ಕೆ ಕಾರಣಗಳೇನು ? (ಸಂಪೂರ್ಣ ವಿವರ ನೀಡುವುದು)

**ಕೆ. ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 0223/500 ಪ್ರತಿಗಳು/20–03–2021